ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

18 ಆಗಸ್ಟ್, 2026 ಸೋಮವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -156 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಗಾಲೆಯಲ್ಲಿ ಶ್ರೀಲಂಕಾ ವಿರುದ್ಧ ನಡೆಯುತ್ತಿರುವ ಮೊದಲ ಟೆಸ್ಟ್ ಪಂದ್ಯದಲ್ಲಿ 4 ವಿಕೆಟ್ ಪಡೆದು ಸಂಭ್ರಮಿಸಿದ ಭಾರತದ ಮಾನವ್ ಸುತಾರ್...




ಬಣ್ಣಗಾರನ ಸಾಹಸಗಳು » 2



ಪ್ರಾಧಿಕಾರದ ಆದೇಶ ಪಾಲಿಸಲು ಸುಪ್ರೀಂ ಸೂಚನೆ » 3



ಬಿಜೆಪಿ ಪದಾಧಿಕಾರಿಗಳ ಪಟ್ಟಿ : ರಾಜ್ಯದ ಇಬ್ಬರಿಗೆ ಸ್ಥಾನ » 4


# ನಾಗೇಂದ್ರ ರಾಜೀನಾಮೆಗೆ ಪಟ್ಟು: ಕಲಾಪ ಕೋಲಾಹಲ

- ವಿಧಾನಸಭೆ, ವಿಧಾನ ಪರಿಷತ್‌ನಲ್ಲೂ ಗದ್ದಲ
- ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್ ವಾಗ್ದಾಳಿ

• ಪ್ರಜೋದಯ ವರದಿ

**ಬೆಂಗಳೂರು:** ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಅಕ್ರಮ ಪ್ರಕರಣದ ವಿಚಾರ ವಿಧಾನ ಮಂಡಲದ ಮುಂಗಾರು ಅಧಿವೇಶನ ದಲ್ಲಿ ಮತ್ತೆ ರಾಜಕೀಯ ಕದನಕ್ಕೆ ಕಾರಣವಾಗಿದೆ. ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಬಿಜೆಪಿ ಮತ್ತು ಜೆಡಿಎಸ್ ಪಟ್ಟು ಹಿಡಿದಿದ್ದರಿಂದ ವಿಧಾನ ಸಭೆ ಮತ್ತು ವಿಧಾನ ಪರಿಷತ್‌ನಲ್ಲಿ ತೀವ್ರ ಗದ್ದಲ- ಕೋಲಾಹಲ ಏರ್ಪಟ್ಟಿತು.

ಸೋಮವಾರ ವಿಧಾನಸಭೆಯಲ್ಲಿ ಪ್ರಶ್ನೋತ್ತರ ಅವಧಿ ಆರಂಭವಾಗುತ್ತಿದ್ದಂತೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮತ್ತು ಶಾಸಕ ಸುನಿಲ್ ಕುಮಾರ್ ಈ ವಿಷಯವನ್ನು ಪ್ರಸ್ತಾಪಿಸಿ, ಭ್ರಷ್ಟ ಸಚಿವರೊಂದಿಗೆ ಪ್ರಶ್ನೋತ್ತರ ಅವಧಿಯಲ್ಲಿ ಹೇಗೆ ಭಾಗವಹಿಸಬೇಕೆಂದು ಪ್ರಶ್ನಿಸಿದರು.

ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು, ಇಲ್ಲವೇ ಅವರನ್ನು ಸಂಪುಟದಿಂದ ವಜಾಗೊಳಿಸಬೇಕೆಂದು ಒತ್ತಾಯಿಸಿದ ಅಶೋಕ್, ಅವರನ್ನು ವಜಾಗೊಳಿಸದ ಹೊರತು ನಾವು ಸದನ ನಡೆಸಲು ಬಿಡುವುದಿಲ್ಲ. ಮುಖ್ಯಮಂತ್ರಿ ಅವರನ್ನು ತಕ್ಷಣವೇ ಸಂಪುಟದಿಂದವಜಾಗೊಳಿಸಬೇಕೆಂದು ಆಗ್ರಹಿಸಿದರು.

ಇದೇ ಸದನದಲ್ಲಿ ಈ ಹಿಂದೆ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋ. ರೂ. ಅಕ್ರಮ ಹಣ ವರ್ಗಾವಣೆ ಆರೋಪ ಕೇಳಿಬಂದ ಹಿನ್ನಲೆ ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವರ ರಾಜೀನಾಮೆ ಪಡೆದಿದ್ದರು. ಅವರನ್ನು ಸಂಪುಟದಿಂದ ತೆಗೆದಿದ್ದು ಏಕೆ ಮತ್ತೆ ಸಂಪುಟಕ್ಕೆ ಸೇರ್ಪಡೆ ಮಾಡಿಕೊಂಡಿರುವುದು ಏಕೆಂಬುದನ್ನು ಸದನಕ್ಕೆ ತಿಳಿಸಬೇಕೆಂದು ಆಗ್ರಹಿಸಿದರು.



ಈ ಹಂತದಲ್ಲಿ ಸಭಾಧ್ಯಕ್ಷ ಜಿ.ಎಸ್.ಪಾಟೀಲ್ ಅವರು, ನೋಟೀಸ್ ನೀಡಿ ವಿಷಯ ಪ್ರಸ್ತಾಪಿಸಬೇಕು. ಏಕಾಏಕಿ ಈ ವಿಚಾರವನ್ನು ಪ್ರಸ್ತಾಪಿಸಿದರೆ ಹೇಗೆ ನಿಯಮಾವಳಿಗಳ ಪ್ರಕಾರ ಸದನ ನಡೆಯಬೇಕಲ್ಲವೇ ಎಂದರು. ಆದರೂ ಬಿಜೆಪಿ ಶಾಸಕರು ಸಭಾಧ್ಯಕ್ಷರ ಮನವಿಗೆ ಕಿವಿ ಗೊಡದೆ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

» ನಾಲ್ಕನೇ ಪುಟದಲ್ಲಿ

### ಸದನದೊಳಗೆ ಎನ್‌ಕೌಂಟರ್ ಗದ್ದಲ

ವಿಧಾನಸಭೆಯ ಕಲಾಪದಲ್ಲಿಂದು ಹನೂರು ಎನ್‌ಕೌಂಟರ್ ಪ್ರಕರಣ ಭಾರೀ ಚರ್ಚೆಗೆ ಕಾರಣವಾಯಿತು. ಪ್ರಕರಣದಲ್ಲಿ ಮೂವರು ಬೇಟೆಗಾರರ ಎನ್‌ಕೌಂಟರ್ ಹಿನ್ನಲೆ ಸರ್ಕಾರ ಸ್ಪಷ್ಟನೆ ನೀಡಬೇಕೆಂದು ವಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದರು. ಉಪಮುಖ್ಯಮಂತ್ರಿ ಪರಮೇಶ್ವರ್ ಅವರು ಪ್ರತಿಕ್ರಿಯಿಸಿ, ಮೊದಲು ಪ್ರಶ್ನೋತ್ತರ ಕಲಾಪಕ್ಕೆ ಅವಕಾಶ ನೀಡಬೇಕು. ಬಳಿಕ ಪ್ರಕರಣದ ಕುರಿತು ಚರ್ಚೆಗೆ ನಿಲುವಳಿ ಸೂಚನೆ ನೀಡುವಂತೆ ಸಲಹೆ ನೀಡಿದರು. ಈ ವೇಳೆ ಮಧ್ಯಪ್ರವೇಶಿಸಿದ ಬಿಜೆಪಿ ಶಾಸಕ ಸುನೀಲ್ ಕುಮಾರ್, ಸರ್ಕಾರ ಘಟನೆ ಬಗ್ಗೆ ಸ್ವಯಂಪ್ರೇರಿತ ಹೇಳಿಕೆ ನೀಡುತ್ತದೆ ಎಂದುಕೊಂಡಿದ್ದೆವು. ಸರ್ಕಾರ ಹೇಳಿಕೆ ನೀಡದ ಹಿನ್ನಲೆ ನಾವೇ ವಿಷಯ ಪ್ರಸ್ತಾಪಿಸಿದ್ದೇವೆ. ಚರ್ಚೆಗೆ ನೋಟೀಸ್ ಕೊಡಿ ಅಂತಿದ್ದೀರಲ್ಲ, ಎನ್‌ಕೌಂಟರ್ ಮಾಡುವ ಮುನ್ನ ಸತ್ತವರಿಗೆ ನೋಟೀಸ್ ಕೊಟ್ಟಿದ್ದೀರಾ ಎಂದು ಪ್ರಶ್ನಿಸಿದರು. ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅಶೋಕ್, ಸರ್ಕಾರಕ್ಕೆ ಮಾನ-ಮರ್ಯಾದೆ ಇಲ್ಲ, ಇದು ಎನ್‌ಕೌಂಟರ್ ಅಲ್ಲ ಕೊಲೆ ಎಂದು ಆರೋಪಿಸಿದರು. ಎನ್‌ಕೌಂಟರ್ ಪ್ರಕರಣದ ಬಗ್ಗೆ ಸಂಪೂರ್ಣ ಚರ್ಚೆಗೆ ಅವಕಾಶ ನೀಡಬೇಕು ಎಂದು ಆಗ್ರಹಿಸಿದರು. ಇದರಿಂದ ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ವಾಕ್ಸಮರ ನಡೆಯಿತು. ಸದನದಲ್ಲಿ ಕೆಲಕಾಲ ಗದ್ದಲದ ವಾತಾವರಣ ನಿರ್ಮಾಣವಾಯಿತು



### ಚನ್ನಮ್ಮನವರ ತಿಂಗಳ ಆರಾಧನೆ : ದೇವಾಲಯದಲ್ಲಿ ವಿಶೇಷ ಪೂಜೆ

• ಪ್ರಜೋದಯ ವರದಿ

**ಹೊಳೆನರಸೀಪುರ:** ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ಪತ್ನಿ ಶ್ರೀಮತಿ ಚನ್ನಮ್ಮ ಅವರ ತಿಂಗಳ ಆರಾಧನಾ ಅಂಗವಾಗಿ ಕುಟುಂಬದ ಸದಸ್ಯರು ಸೋಮವಾರ ಹರದನಹಳ್ಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು.

ಆರಾಧನಾ ಕಾರ್ಯಕ್ರಮಕ್ಕೂ ಮುನ್ನ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಸೇರಿ ಕುಟುಂಬದ ಸದಸ್ಯರು ಹರದನಹಳ್ಳಿ ಹಾಗು ಪಟ್ಟಣದ ನೀಲಕಂಠೇಶ್ವರ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ದೇವರಿಗೆ ರುದ್ರಾಭಿಷೇಕ ನೆರವೇರಿಸಿದರು. ನಂತರ ಹರದನಹಳ್ಳಿಯ ಮಾವಿನಕೆರೆ ರಂಗನಾಥಸ್ವಾಮಿ ಬೆಟ್ಟದ ತಪ್ಪಲಿನಲ್ಲಿರುವ ಚನ್ನಮ್ಮ ಅವರ ಸಮಾಧಿ ಸ್ಥಳಕ್ಕೆ ತೆರಳಿ ನಮನ ಸಲ್ಲಿಸಿದರು. ತಿಂಗಳ ಆರಾಧನಾ ಕಾರ್ಯಕ್ರಮದಲ್ಲಿ ಕುಟುಂಬದ ಆಪ್ತರು, ಅಭಿಮಾನಿಗಳು ಭಾಗವಹಿಸಿ ಚನ್ನಮ್ಮ ಅವರ ಸ್ಮರಣೆ ಮಾಡಿದರು.

## ಮಾಡಾಳು ಸ್ವರ್ಣಗೌರಿ ದೇವಾಲಯ ಲೋಕಾರ್ಪಣೆ

• ಪ್ರಜೋದಯ ವರದಿ

**ಮಾಡಾಳು:** ಇತಿಹಾಸ ಪ್ರಸಿದ್ಧ ಪುಣ್ಯಕ್ಷೇತ್ರ ಮಾಡಾಳು ಗ್ರಾಮದ ಮೂಗುತಿ ಸುಂದರಿ ಮೂಲಸ್ಥಾನ ಶ್ರೀ ಸ್ವರ್ಣ ಗೌರಿ ದೇವಿಯ ನೂತನ ಶಿಲಾ ದೇವಾಲಯದ ಲೋಕಾರ್ಪಣೆ ಧಾರ್ಮಿಕ ವಿಧಿವಿಧಾನಗಳೊಂದಿಗೆ ಶ್ರದ್ಧಾಭಕ್ತಿಯಿಂದ ಸೋಮವಾರ ನೆರವೇರಿತು.

ಹಾರನಹಳ್ಳಿ ಕೋಡಿಮಠದ ಜಗದ್ಗುರು ಡಾ. ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿಯವರ ಆಶೀರ್ವಾದದೊಂದಿಗೆ 2 ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು.

ನೂತನ ದೇವಾಲಯದ ಲೋಕಾರ್ಪಣೆ ಅಂಗವಾಗಿ ಭಾನುವಾರ ಸಂಜೆ ಕೋಡಿಮಠದ ಉತ್ತರಾಧಿಕಾರಿ ಶ್ರೀ ಚೇತನ್ ಮುರಿದೇವರ ಸಾನಿಧ್ಯದಲ್ಲಿ ಹಾಗು ಗ್ರಾಮದ ಆರಾಧ್ಯ ದೈವ ಶ್ರೀ ಗುರು ಚನ್ನಬಸವೇಶ್ವರ ಸ್ವಾಮಿ ಸಮ್ಮುಖದಲ್ಲಿ ಧಾರ್ಮಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಯಿತು. ಮೂಲ ಸನ್ನಿಧಿಯಲ್ಲಿ ಮುತ್ತೈಯರು ಗಂಗಾಪೂಜೆ ನೆರವೇರಿಸಿ, ಕುಂಭಗಳನ್ನು ತಲೆಯ ಮೇಲೆ ಹೊತ್ತು ಮಂಗಲ ಕರಡೇವಾದ್ಯಗಳೊಂದಿಗೆ ಉತ್ಸವ ನಡೆಸಿದರು.

ಈ ಸಂದರ್ಭದಲ್ಲಿ ಸುತ್ತಮುತ್ತಲಿನ 18 ಗ್ರಾಮಗಳ ದೇವರುಗಳ ಉತ್ಸವವೂ ನಡೆಯಿತು. 12 ಗ್ರಾಮಗಳ



ಗ್ರಾಮ ದೇವತೆಗಳಾದ ಕರಿಯಮ್ಮ ದೇವಿ, ಚೌಡೇಶ್ವರಿ, ಬೊಮ್ಮಸಂದ್ರ ಚನ್ನಬಸವಣ್ಣ, ಕಡಲಮಗೆ ಬಸವಣ್ಣ, ಹೊಸಹಳ್ಳಿ ಬಸವಣ್ಣ, ರಂಗನಾಥ ಸ್ವಾಮಿ ಸೇರಿ ವಿವಿಧ ದೇವರುಗಳು ಉತ್ಸವದಲ್ಲಿ ಪಾಲ್ಗೊಂಡಿದ್ದವು.

ಸೋಮವಾರ ಮುಂಜಾನೆಯಿಂದಲೇ ದೇವಾಲಯದ ಆವರಣದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು. ಮಧ್ಯಾಹ್ನ 12 ಗಂಟೆಗೆ ಕೆಬಿದರೆ ದೊಡ್ಡಮಠದ ಪ್ರಭುಕುಮಾರ ಶಿವಾಚಾರ್ಯ ಸ್ವಾಮೀಜಿ ಅವರು ದೇವಾಲಯದ ವಿಮಾನ ಗೋಪುರದ ಮೇಲೆ ಕಳಸ ಪ್ರತಿಷ್ಠಾಪನೆ ನೆರವೇರಿಸಿದರು. ಕೋಡಿಮಠದ ಉತ್ತರಾಧಿಕಾರಿ ಶ್ರೀ ಚೇತನ್ ಮುರಿದೇವರು, ನಿರಂಜನ ಪೀಠದ ಶ್ರೀ ರುದ್ರಮುನಿ ಸ್ವಾಮೀಜಿ, ಕೋಡಿಮಠದ ಮಹದೇವಪ್ಪ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

# ನೈಸ್ ಯೋಜನೆ: ರೈತರ ಭೂಮಿ ಲೂಟಿಗೆ ಬಿಡುವುದಿಲ್ಲ

## ಸರ್ಕಾರ ಎಚ್ಚರಿಸಲು ಮುಖ್ಯಮಂತ್ರಿಗೆ ಪತ್ರ: ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ನೈಸ್ ರಸ್ತೆ ಯೋಜನೆ ಆರಂಭಿಕ ಹಂತದಲ್ಲೇ ತನಗೆ ಬೇಕಾದ ರೀತಿಯಲ್ಲಿ ಸಂಪನ್ಮೂಲಗಳನ್ನು ಪಡೆದುಕೊಳ್ಳುವ ಪ್ರಯತ್ನ ನಡೆದಿದೆ. ರೈತರ ಭೂಮಿಯನ್ನು ಮತ್ತೊಂದು ರೀತಿಯಲ್ಲಿ ಲೂಟಿ ಹೊಡೆಯ ಬಾರದೆಂಬ ಎಚ್ಚರಿಕೆಯಿಂದಲೇ ಮುಖ್ಯ ಮಂತ್ರಿಗೆ ಪತ್ರ ಬರೆದಿದ್ದೇನೆಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರ ಸ್ವಾಮಿ ಅವರು ಹೇಳಿದರು.

ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೈಸ್ ಯೋಜನೆ ಕುರಿತು ನಾನು ಬರೆದಿರುವ ಪತ್ರದಲ್ಲಿ ನ್ಯಾಯಾಲಯದ ತೀರ್ಪುಗಳಲ್ಲಿ ಉಲ್ಲೇಖವಾಗಿರುವ ಅಂಶಗಳನ್ನೇ ಪ್ರಸ್ತಾಪಿಸಿದ್ದೇನೆ. 1995ರಲ್ಲಿ ಯೋಜನೆಗೆ ಸಂಬಂಧಿಸಿದಂತೆ ಒಡಂಬಡಿಕೆ ಮಾಡಿಕೊಂಡ ಸಂದರ್ಭದಲ್ಲಿ ಅಮೇರಿಕಾದ ಪ್ರಾಂತ್ಯದ ಗವರ್ನರ್ ಭಾಗವಹಿಸಿದ್ದರು. ಅಂದಿನ ಮುಖ್ಯಮಂತ್ರಿ ಹೆಚ್.ಡಿ.ದೇವೇಗೌಡ ಅವರು ಒಡಂಬಡಿಕೆ ಮಾಡಿಕೊಂಡು ದೆಹಲಿಗೆ ತೆರಳಿದ್ದರು. ನಂತರದ ದಿನಗಳಲ್ಲಿ ಕಂಪನಿ ಹಲವು ರೀತಿಯಲ್ಲಿ



ಯೋಜನೆಯಲ್ಲಿ ಮಾರ್ಪಾಡು ಮಾಡಿಕೊಂಡು ಬಂದಿದೆ ಎಂದರು.

ನಾವು ವಿರೋಧ ಪಕ್ಷದಲ್ಲಿದ್ದೇವೆ. ಅಧಿಕಾರ ದುರುಪಯೋಗದ ವಿಚಾರದಲ್ಲಿ ನಾವು ರಾಜಿ ಮಾಡಿಕೊಳ್ಳುವುದಿಲ್ಲ. ಇದು ರಾಜ್ಯದ ಆಸ್ತಿ, ರೈತರ ಭೂಮಿ. ಬಿಎಂಐಸಿ ರಸ್ತೆಗೆ ಸಂಬಂಧಿಸಿದಂತೆ ಸರ್ಕಾರವನ್ನು ದಾರಿ ತಪ್ಪಿಸಿ, ಅಧಿಕಾರಿಗಳು ಹಾಗು ಸರ್ಕಾರದಲ್ಲಿದ್ದ ಕೆಲ ಪ್ರಮುಖ ವ್ಯಕ್ತಿಗಳನ್ನು ದುರ್ಬಳಕೆ ಮಾಡಿಕೊಂಡಿರುವ ಆರೋಪಗಳಿವೆ. ನ್ಯಾಯಾಲಯಗಳಿಗೆ ತಪ್ಪು ದಾಖಲೆ ಗಳನ್ನು ಸಲ್ಲಿಸಿ ಕಂಪನಿಯ ಪರವಾಗಿ ತೀರ್ಪುಗಳನ್ನು ಪಡೆಯಲಾಗಿದೆ ಎಂದು ಆರೋಪಿಸಿದರು.

### ಸಿಎಂ ರಾಜ್ಯದ ಆಸ್ತಿ ರಕ್ಷಿಸಲಿ

ಮುಂದಿನ ತಲೆಮಾರುಗಳು ಖರ್ಚು ಮಾಡಿದರೂ ಹಣ ಕರಗದಷ್ಟು ಆಸ್ತಿ ಮಾಡಿದ್ದೇನೆಂದು ಮುಖ್ಯಮಂತ್ರಿ ಇತ್ತೀಚೆಗೆ ಹೇಳಿದ್ದಾರೆ. ಅಧಿಕಾರ ದುರುಪಯೋಗಪಡಿಸಿಕೊಳ್ಳದೆ, ರಾಜ್ಯದ ಸಂಪತ್ತನ್ನು ಉಳಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ರಾಜ್ಯದ ಮುಖ್ಯಮಂತ್ರಿಗಳ ಪರಂಪರೆಗೆ ಗೌರವ ತರಬೇಕಾದರೆ ರಾಜ್ಯದ ಆಸ್ತಿಯನ್ನು ರಕ್ಷಿಸಬೇಕೆಂದು ಹೇಳಿದರು.

ದೇಶದ ಇತಿಹಾಸದಲ್ಲೇ ಈ ಯೋಜನೆಗೆ ಸಂಬಂಧಿಸಿದಂತೆ ಇಷ್ಟೊಂದು ಬಾರಿ ನ್ಯಾಯಾಲಯದ ಮೆಟ್ಟಿಲೇರಿರುವ ಉದಾಹರಣೆ ಇಲ್ಲ. ಕಂಪನಿ 30 ವರ್ಷಗಳನ್ನು ಪೂರೈಸಿದೆ. 111 ಕಿ.ಮೀ. ರಸ್ತೆ ನಿರ್ಮಾಣವಾಗಬೇಕಿದ್ದರೂ ಕಾಮಗಾರಿ ಪೂರ್ಣಗೊಂಡಿಲ್ಲ. ಬೆಂಗಳೂರಿನ ಸುತ್ತಮುತ್ತ ಯೋಜನೆ ತರಲು ಆಸಕ್ತಿ ತೋರಲಾಗುತ್ತಿದೆಯೇ ಹೊರತು ರಸ್ತೆ ನಿರ್ಮಾಣ ಪೂರ್ಣಗೊಳಿಸುವ ಬಗ್ಗೆ ಆಸಕ್ತಿ ಕಾಣುತ್ತಿಲ್ಲ. ಅಲ್ಲಿರುವ ಬೆಲೆ ಬಾಳುವ ಭೂಮಿಯ ಮೇಲೆ ಯಾರ ಕಣ್ಣು ಇದೆ ಎಂಬುದನ್ನು ಜನರು ಅರ್ಥಮಾಡಿಕೊಳ್ಳಬೇಕು ಎಂದರು.

ನೈಸ್ ಯೋಜನೆಗೆ ಸಂಬಂಧಿಸಿದ ನ್ಯಾಯಾಲಯದ ತೀರ್ಪಿನಲ್ಲಿಯೂ ಗಂಭೀರವಾದ ಅಂಶಗಳನ್ನು ಉಲ್ಲೇಖಿಸಲಾಗಿದೆ. ಅಕ್ರಮವಾಗಿ ಶುಲ್ಕ ಸಂಗ್ರಹಿಸಲಾಗುತ್ತಿದೆ. 2 ಸಾವಿರ ಕೋ.ರೂ.ಗೂ ಅಧಿಕ ಹಣವನ್ನು ಕಂಪನಿ ದುರ್ಬಳಕೆ ಮಾಡಿಕೊಂಡು ಸಂಗ್ರಹಿಸಿದೆ ಎಂಬ ಆರೋಪವಿದೆ. ತೀರ್ಪು ಬಂದು 20 ದಿನಗಳಾಗಿದ್ದರೂ ಸರ್ಕಾರ ಏನು ಕ್ರಮ ಕೈಗೊಂಡಿದೆ ಎಂಬುದನ್ನು ತಿಳಿಸಬೇಕು. ಇದೇ ವಿಚಾರವನ್ನು ನೆನಪಿಸಲು ನಾನು ಪತ್ರ ಬರೆದಿದ್ದೇನೆಂದು ಹೇಳಿದರು.

**ಜಾಹೀರಾತು ಬಿಟ್ಟು ವರದಿ ಪ್ರಕಟಿಸಲಿ**

ಬಿಡದಿ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ನೀಡುತ್ತಿರುವ ಜಾಹೀರಾತುಗಳ ಕುರಿತು ಆಕ್ಷೇಪ ವ್ಯಕ್ತಪಡಿಸಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು, ಜನರಿಗೆ ಮಾಹಿತಿ ನೀಡಲು ಇನ್ನೂ ಹತ್ತು ಪುಟಗಳ ಜಾಹೀರಾತು ನೀಡಲಿ. ಆದರೆ, ಅದರೊಂದಿಗೆ ಸತ್ಯಶೋಧನಾ ಸಮಿತಿ ಹಾಗು ಕಾಗೋಡು ತಿಮ್ಮಪ್ಪ ಸಮಿತಿಯ ವರದಿಯನ್ನೂ ಪ್ರಕಟಿಸಲಿ ಎಂದು ಒತ್ತಾಯಿಸಿದರು.

ಸರ್ಕಾರ ಜನರಿಗೆ ಏನು ಮಾಹಿತಿ ನೀಡಬೇಕೋ ನೀಡಲಿ. ಇನ್ನೂ ಹತ್ತು ಪುಟಗಳ ಜಾಹೀರಾತು ಬೇಕಾದರೂ ನೀಡಲಿ. ಆದರೆ, ಬಿಡದಿಯ ಜನರು ಹಾಗು ರೈತರು ಏನು ಹೇಳುತ್ತಿದ್ದಾರೆಂಬುದನ್ನು ಸರ್ಕಾರ ಗಮನಿಸಬೇಕು. ರೈತರು ಭೂಮಿ ನೀಡುವುದಿಲ್ಲವೆಂದು ಸ್ಪಷ್ಟವಾಗಿ ಹೇಳುತ್ತಿದ್ದಾರೆ. ಭೂಮಿ ನೀಡದಿದ್ದರೆ ಮಂಜೂರು ಮಾಡಿರುವ ಭೂಮಿಯನ್ನು ವಾಪಾಸ್ ಪಡೆಯುತ್ತೇವೆಂದು ಬೆದರಿಸುವುದು ಏಕೆ, ದಬ್ಬಾಳಿಕೆ ನಡೆಸಿ, ಕೆಲವರನ್ನು ಬಳಸಿಕೊಂಡು ರೈತರನ್ನು ಹೆದರಿಸಿ ಏನು ಸಾಧಿಸಲು ಹೊರಟಿದ್ದೀರಿ, ಈ ಯೋಜನೆ ನಿಮಗೆ ಏಕೆ ಬೇಕಾಗಿದೆ, ಬೇರೆ ಕಡೆ ಜಾಗ ಇಲ್ಲವೇ ಎಂಬುದನ್ನು ಜನರ ಮುಂದಿಡಿ ಎಂದು ಸರ್ಕಾರವನ್ನು ಪ್ರಶ್ನಿಸಿದರು.

### ಸರ್ಕಾರದ ನಡೆ ಪಾರದರ್ಶಕವಾಗಿರಲಿ

ನೈಸ್ ಯೋಜನೆಯನ್ನು ಈಗ ಕಂಪನಿಯಿಂದ ಯಾರು ಟೇಕ್ ಓವರ್ ಮಾಡಲು ಹೊರಟಿದ್ದಾರೆ, ಯಾರ ಪಾಲಿಗೆ ಹೋಗುತ್ತಿದೆ, ಯಾರು ಟೇಕ್ ಓವರ್ ಮಾಡಲು ಮುಂದಾಗಿದ್ದಾರೆಂಬುದನ್ನು ಮುಖ್ಯಮಂತ್ರಿ ಸಾರ್ವಜನಿಕವಾಗಿ ತಿಳಿಸಬೇಕು. ಮಾಧ್ಯಮಗಳ ಮುಂದೆ ಹಾಗು ವೇದಿಕೆ ಮೇಲೆ ಭಾಷಣ ಮಾಡುವುದಷ್ಟೇ ಸಾಲದು. ಸರ್ಕಾರದ ನಡೆ ಪಾರದರ್ಶಕವಾಗಿರಬೇಕೆಂದು ಕುಮಾರಸ್ವಾಮಿ ಅವರು ಒತ್ತಾಯಿಸಿದರು.

ಬಿಡದಿ ಹೋರಾಟದ ಕುರಿತು ಪ್ರತಿಕ್ರಿಯಿಸಿ, ಯಾರು ಏನು ಬೇಕಾದರೂ ಟೀಕೆ ಮಾಡಲಿ, ಸಂಶಯ ವ್ಯಕ್ತಪಡಿಸಲಿ. ರೈತರು ಹಾಗು ರೈತ ಕುಟುಂಬಗಳ ಮಹಿಳೆಯರು ಕಳೆದ 500 ದಿನಗಳಿಂದ ಬಿಡದಿಯಲ್ಲಿ ಭೂಮಿ ನೀಡುವುದಿಲ್ಲ ಎಂದು ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದಾರೆ. ಅವರು ನನ್ನ ಬಳಿ ಬಂದು ತಮ್ಮ ಪರವಾಗಿ ಧ್ವನಿ ಎತ್ತುವಂತೆ ಮನವಿ ಮಾಡಿದ್ದಾರೆ. ಹೀಗಾಗಿ ಅವರ ಪರವಾಗಿ ಧ್ವನಿ ಎತ್ತಿದ್ದೇನೆ. ಅದರಲ್ಲಿ ಯಾವುದೇ ರಾಜಕೀಯ ಉದ್ದೇಶ ಅಥವಾ ರಾಜಕೀಯ ಅಸೂಯೆಯ ಪ್ರಶ್ನೆಯೇ ಇಲ್ಲವೆಂದು ಸ್ಪಷ್ಟಪಡಿಸಿದರು.

# ಜಿಲ್ಲೆಯ ಕೃಷಿಗೆ ನೀರು ಹರಿಸದೆ ಅನ್ಯಾಯ

**ಬಿಜೆಪಿ ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಬಿ.ಹೆಚ್.ನಾರಾಯಣಗೌಡ ಆರೋಪ**

• ಪ್ರಜೋದಯ ವರದಿ

**ಹಾಸನ:** ಮಳೆ ಕೊರತೆಯಿಂದಾಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಈ ಸಂದರ್ಭದಲ್ಲಿ ಹೇಮಾವತಿ ಜಲಾಶಯದಿಂದ ತಮಿಳುನಾಡಿಗೆ ನೀರು ಹರಿಸಿ, ಜಿಲ್ಲೆಯ ರೈತರಿಗೆ ನೀರು ನೀಡದೆ ಅನ್ಯಾಯ ಮಾಡಲಾಗುತ್ತಿದೆ ಎಂದು ಬಿಜೆಪಿ ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಬಿ.ಹೆಚ್.ನಾರಾಯಣಗೌಡ ಅವರು ದೂರಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೇಮಾವತಿ ಜಲಾಶಯದ ನೀರು ಹಾಸನ ಮಾತ್ರವಲ್ಲದೆ ಮಂಡ್ಯ, ತುಮಕೂರು ಜಿಲ್ಲೆಗಳ ರೈತರ ಕೃಷಿ ಹಾಗು ಹಲವು ಪ್ರದೇಶಗಳ ಕುಡಿಯುವ ನೀರಿನ ಅಗತ್ಯಕ್ಕೂ ಪ್ರಮುಖವಾಗಿದೆ. ರೈತರ ಹಿತದೃಷ್ಟಿಯಿಂದ ಜಲಾಶಯದ ನೀರಿನ ಲಭ್ಯತೆ ಹಾಗು ಭವಿಷ್ಯದ ಅಗತ್ಯವನ್ನು ಪರಿಗಣಿಸಿ ವೈಜ್ಞಾನಿಕವಾಗಿ ನೀರು ನಿರ್ವಹಣೆ ಮಾಡಬೇಕು. ಸ್ಥಳೀಯ ರೈತರ ಅಗತ್ಯವನ್ನು ಕಡೆಗಣಿಸಿ ಹೊರರಾಜ್ಯಕ್ಕೆ ನೀರು ಹರಿಸುವ ನಿರ್ಧಾರವನ್ನು ಸರ್ಕಾರ ಮರುಪರಿಶೀಲಿಸಬೇಕೆಂದು ಒತ್ತಾಯಿಸಿದರು.




ಜಿಲ್ಲೆಯಲ್ಲಿ ಬರದ ಪರಿಸ್ಥಿತಿಯಿಂದ ರೈತರು ಕೃಷಿ ಚಟುವಟಿಕೆ ಕೈಗೊಳ್ಳಲು ಸಾಧ್ಯವಾಗದ ಸ್ಥಿತಿ ಇದೆ. ಸಮರ್ಪಕವಾಗಿ ಯಾವ ಬೆಳೆ ಬೆಳೆಯಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಭತ್ತ, ಕಬ್ಬು ಸೇರಿ ವಿವಿಧ ಬೆಳೆ ಬೆಳೆಯದಂತೆ ಸರ್ಕಾರದಿಂದ ಸೂಚನೆ ನೀಡಲಾಗಿದೆ. ಹೀಗಿದ್ದರೂ ರೈತರ ಸಂಕಷ್ಟ ಪರಿಗಣಿಸದೆ ಹೇಮಾವತಿ ಜಲಾಶಯದ ನೀರನ್ನು ತಮಿಳುನಾಡಿಗೆ ಹರಿಸಲಾಗುತ್ತಿದೆ ಎಂದು ದೂರಿದರು.

ತಮಿಳುನಾಡಿನಲ್ಲಿ ಈಗಾಗಲೇ ಎರಡು ಬೆಳೆಗಳನ್ನು ಬೆಳೆಯಲಾಗಿದೆ. ಅಲ್ಲಿನ ಕೃಷಿ ಚಟುವಟಿಕೆಗಳಿಗೆ ನೀರಿನ ಬಳಕೆ ಆಗಿದೆ. ಆದರೆ, ಹೇಮಾವತಿ ಜಲಾಶಯವನ್ನು ಅವಲಂಬಿಸಿರುವ ಜಿಲ್ಲೆಯ ರೈತರಿಗೆ ತಮ್ಮ ಜಮೀನುಗಳಲ್ಲಿ ಬೆಳೆ ಬೆಳೆಯಲು ಅಗತ್ಯವಾದ ನೀರು ದೊರೆಯುತ್ತಿಲ್ಲ. ಇದು ರೈತರ ಮೇಲೆ ಮತ್ತಷ್ಟು ಆರ್ಥಿಕ ಹೊರೆ ಬೀರುವಂತಾಗಿದೆ ಎಂದು ಹೇಳಿದರು.

ಹೇಮಾವತಿ ಜಲಾಶಯದಿಂದ ರೈತರಿಗೆ ನೀರು ಬಿಡುಗಡೆ ಮಾಡುವಂತೆ ಬಿಜೆಪಿ ಜಿಲ್ಲಾ ರೈತ ಮೋರ್ಚಾ ವತಿಯಿಂದ ಗೊರೂರು ಅಣೆಕಟ್ಟೆಯ ಮುಖ್ಯ ಇಂಜಿನೀಯರ್ ಅವರಿಗೆ ಈಗಾಗಲೇ ಮನವಿ ಸಲ್ಲಿಸಲಾಗಿದೆ. ಜಿಲ್ಲೆಯ ರೈತರ ಪರಿಸ್ಥಿತಿಯನ್ನು ಮನವರಿಕೆ ಮಾಡಿಕೊಟ್ಟು, ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ನೀರನ್ನು ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದೇವೆ ಎಂದು ತಿಳಿಸಿದರು. ಬಿಜೆಪಿ ಜಿಲ್ಲಾ ವಕ್ತಾರ ಆರ್. ಮೋಹನ್, ನಗರಾಧ್ಯಕ್ಷ ಯೋಗೇಶ್‌ಗೌಡ, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ನಟರಾಜು, ಉಪಾಧ್ಯಕ್ಷ ಮಹೇಶ್, ಬಿ.ವೇದಾವತಿ ಇದ್ದರು.

## ಬೈಕ್‌ಗಳ ಮುಖಾಮುಖಿ: ಮಹಿಳೆ ಸಾವು

• ಪ್ರಜೋದಯ ವರದಿ

**ಆಲೂರು :** ತಂದೆ-ಮಗನ ಬೈಕ್‌ಗಳ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಹಿಂದೆ ಕುಳಿತಿದ್ದ ತಾಯಿ ಮೃತಪಟ್ಟ ಘಟನೆ ತಾಲ್ಲೂಕಿನ ಹೊಸಪುರ ಗ್ರಾಮದ ಬಳಿ ನಡೆದಿದೆ. ಹೊಸಪುರ ಗ್ರಾಮದ ಗೋವಿಂದೇಗೌಡ ಅವರ ಪತ್ನಿ ನೀಲಮ್ಮ (55) ಮೃತ ಪಟ್ಟಿದ್ದಾರೆ.

ಗೋವಿಂದೇಗೌಡ ಅವರು ಪತ್ನಿ ನೀಲಮ್ಮ ಅವರಿಗೆ ಪಟ್ಟಣದ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಮನೆಗೆ ವಾಪಾಸ್ ಬೈಕ್ ನಲ್ಲಿ ತೆರಳುತ್ತಿದ್ದಾಗ ಹೊಸಪುರ ಗ್ರಾಮದ ಬಳಿ ಎದುರಿನಿಂದ ಬಂದ ಅವರ ಪುತ್ರ ಭರತ್‌ಕುಮಾರ್ ಚಲಾಯಿಸುತ್ತಿದ್ದ ಬೈಕ್ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಬೈಕ್‌ನ ಹಿಂಬದಿ ಕುಳಿತ್ತಿದ್ದ ನೀಲಮ್ಮ ರಸ್ತೆಗೆ ಬಿದ್ದು, ತೀವ್ರ ರಕ್ತಸ್ರಾವ ವಾಗಿತ್ತು. ಆಸ್ಪತ್ರೆಗೆ ಕರೆದು ಕೊಂಡು ಹೋದಾಗ ವೈದ್ಯರು ಮೃತ ಪಟ್ಟಿರುವುದನ್ನು ದೃಢಪಡಿಸಿದ್ದಾರೆ.

# ರೈತರಿಗಾಗಿ ಜೀವ ಇರುವವರೆಗೂ ಹೋರಾಟ

## ಜೈಲಿನ ಅನುಭವ ತೀವ್ರ ಮಾನಸಿಕ ನೋವುಂಟು ಮಾಡಿದೆ : ಲಿಂಗೇಶ್

• ಪ್ರಜೋದಯ ವರದಿ

**ಬೇಲೂರು:** ರೈತರ ಪರವಾಗಿ ಕೈಗೊಂಡಿರುವ ಹೋರಾಟವನ್ನು ಯಾವುದೇ ಸಂಕಷ್ಟ ಎದುರಾದರೂ ಮುಂದುವರಿಸುವುದಾಗಿ ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಅವರು ಹೇಳಿದರು.

ಜೈಲಿನಿಂದ ಬಿಡುಗಡೆಯಾಗಿ ಪಟ್ಟಣಕ್ಕೆ ಆಗಮಿಸಿದ ಅವರನ್ನು ರೈತ ಮುಖಂಡರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಜೆಡಿಎಸ್ ಕಾರ್ಯಕರ್ತರು ಸ್ವಾಗತಿಸಿದರು. ಈ ವೇಳೆ ಮಾತನಾಡಿದ ಅವರು, ಜೈಲುವಾಸದ ಅನುಭವ ಮಾನಸಿಕವಾಗಿ ತೀವ್ರ ನೋವುಂಟು ಮಾಡಿದೆ. ಜೈಲಿನಲ್ಲಿದ್ದ ಸಂದರ್ಭದಲ್ಲಿ ಸಾರ್ವಜನಿಕ ಜೀವನ ಮುಂದುವರಿಸಬೇಕೆಂಬ ಪ್ರಶ್ನೆಯೂ ನನ್ನಲ್ಲಿ ಮೂಡಿತ್ತು. ಆದರೆ, ಬಿಡುಗಡೆಯಾದ ಬಳಿಕ ಅಪಾರ ಸಂಖ್ಯೆಯಲ್ಲಿ ಜನರು ನನ್ನ ಬೆಂಬಲಕ್ಕೆ ನಿಂತಿರುವುದನ್ನು ಕಂಡು ಮತ್ತೆ ರೈತರ ಪರವಾಗಿ ಹೋರಾಡುವ ಆತ್ಮಸ್ಥೈರ್ಯ ಬಂದಿದೆ ಎಂದರು.

ತಮ್ಮ ವಿರುದ್ಧದ ಪ್ರಕರಣ ನ್ಯಾಯಾಲಯದಲ್ಲಿರುವುದರಿಂದ ಅದರ ಕುರಿತು ಹೆಚ್ಚಿನ ಚರ್ಚೆ ಮಾಡುವುದಿಲ್ಲ. ನ್ಯಾಯಾಲಯದ ಮೇಲೆ ಸಂಪೂರ್ಣ ವಿಶ್ವಾಸವಿದ್ದು, ಮುಂದಿನ ದಿನಗಳಲ್ಲಿ ಸತ್ಯ ಹೊರಬರಲಿದೆ. ನ್ಯಾಯಾಲಯದ ತೀರ್ಪಿಗೆ ಗೌರವ ನೀಡುವುದು ತಮ್ಮ ಕರ್ತವ್ಯ. ಹಿಂದಿನ ಶಾಸಕ ವೈ.ಎನ್. ರುದ್ರೇಶ್‌ಗೌಡ ಅವರು ರೈತರು ಹಾಗು ಬಡವರ ಪರವಾಗಿ ಹಲವು



> **ನಾನು ಜೈಲಿನಲ್ಲಿದ್ದ ಸಂದರ್ಭದಲ್ಲಿ ಸಿಂಪತಿ ಗಿಟ್ಟಿಸಿಕೊಳ್ಳಲು ಜೈಲಿಗೆ ಹೋಗಿದ್ದಾರೆಂದು ಕೆಲವರು ಮಾತನಾಡಿದ್ದಾರೆ. ಜೈಲಿನ ಸ್ಥಿತಿಗತಿ, ಅಲ್ಲಿನ ನೋವು ಹಾಗು ಮಾನಸಿಕ ಒತ್ತಡ ಹೇಗಿರುತ್ತದೆ ಎಂಬುದು ತಿಳಿಯಬೇಕಾದರೆ ಒಮ್ಮೆ ಜೈಲಿಗೆ ಹೋಗಿ ಬನ್ನಿ. ಆಗ ಅದರ ಅನುಭವ ಅರ್ಥವಾಗುತ್ತದೆ. ಜೈಲುವಾಸ ಯಾರಿಗೂ ಸುಲಭದ ಅನುಭವವಲ್ಲ. ಕುಟುಂಬದವರು, ಸ್ನೇಹಿತರು ಹಾಗು ತಮ್ಮೊಂದಿಗೆ ನಿಂತಿರುವ ಜನರು ನೆನಪಾಗಿ ಮಾನಸಿಕವಾಗಿ ಜರ್ಜರಿತರಾಗುವ ಪರಿಸ್ಥಿತಿ ಎದುರಾಗುತ್ತದೆ**
>
> **-ಕೆ.ಎಸ್.ಲಿಂಗೇಶ್, ಮಾಜಿ ಶಾಸಕ**

ಕೆಲಸಗಳನ್ನು ಮಾಡಿದ್ದರು. ಅಕ್ರಮ-ಸಕ್ರಮ ಹಾಗು ಬಗರ್‌ಹುಕುಂ ವಿಚಾರದಲ್ಲಿ ಕಾನೂನು ಬದ್ಧವಾಗಿ ಅರ್ಹರಿಗೆ ಜಮೀನು ದೊರಕಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿತ್ತು. ಈ ವಿಚಾರದಲ್ಲಿ ಯಾರ ಮೇಲೂ ಅನಗತ್ಯ ಅಪಪ್ರಚಾರ ಮಾಡಬಾರದೆಂದರು.

**ನೀರಾವರಿ ಯೋಜನೆ ಪೂರ್ಣಗೊಳಿಸಿ**

ರಣಘಟ್ಟ ಸೇರಿ ಹಲವು ನೀರಾವರಿ ಯೋಜನೆಗಳ ಕಾಮಗಾರಿ ಇನ್ನೂ ಪೂರ್ಣಗೊಂಡಿಲ್ಲ. ನೆನೆಗುದಿಗೆ ಬಿದ್ದಿರುವ ಯೋಜನೆಗಳನ್ನು ಶೀಘ್ರ ಪೂರ್ಣಗೊಳಿಸಿ ರೈತರಿಗೆ ನೀರು ಒದಗಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದ ಅವರು, ನಾನು ಹಿಂದೆ ಡಿಪಿಆರ್ ಸಿದ್ಧಪಡಿಸಿದ್ದ ಸುಮಾರು 294 ಕೋ.ರೂ. ವೆಚ್ಚದ ಹೆಬ್ಬಾಳು ನೀರಾವರಿ ಯೋಜನೆಗೆ ಸರ್ಕಾರ ಶೀಘ್ರ ಅನುಮೋದನೆ ನೀಡಬೇಕು. ಹೇಮಾವತಿಯಿಂದ ನೀರನ್ನು ಎತ್ತಿ ಸುಮಾರು 65 ಕೆರೆಗಳನ್ನು ತುಂಬಿಸುವ ಉದ್ದೇಶದ ಈ ಯೋಜನೆಗೆ ಸಚಿವ ಸಂಪುಟದ ಅನುಮೋದನೆ ದೊರೆಯಬೇಕೆಂದು ಆಗ್ರಹಿಸಿದರು.

ಎತ್ತಿನಹೊಳೆ ಯೋಜನೆಯಿಂದ ಲಭ್ಯವಾಗುವ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕೆ ಬಳಸಿಕೊಂಡು ಅಡಗೂರು, ದೊಡ್ಡಕೋಡಿಹಳ್ಳಿ, ಗಂಗೂರು ಸೇರಿ ಅಗತ್ಯವಿರುವ ಪ್ರದೇಶಗಳ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

**ಲಿಂಗೇಶ್ ಪರ ರೈತ ಸಂಘ ಗಟ್ಟಿಯಾಗಿ ನಿಲ್ಲಲಿದೆ**

ಜಿಲ್ಲಾ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಬಳ್ಳೂರು ಸ್ವಾಮಿಗೌಡ ಮಾತನಾಡಿ, ಮಾಡದ ತಪ್ಪಿಗೆ ಲಿಂಗೇಶ್ ಅವರನ್ನು ಬಂಧಿಸಿ ಸುಮಾರು 22 ದಿನ ಜೈಲಿನಲ್ಲಿ ಇರಿಸಲಾಗಿತ್ತು. ಇದು ತಾಲ್ಲೂಕಿನ ಜನರ ಸ್ವಾಭಿಮಾನಕ್ಕೆ ಧಕ್ಕೆ ತಂದಿರುವ ವಿಚಾರ. ರೈತರ ಪರವಾಗಿ ಸದಾ ಹೋರಾಟ ನಡೆಸಿರುವ ಲಿಂಗೇಶ್ ಅವರ ಪರವಾಗಿ ಕರ್ನಾಟಕ ರಾಜ್ಯ ರೈತ ಸಂಘ ಗಟ್ಟಿಯಾಗಿ ನಿಲ್ಲಲಿದೆ ಎಂದರು.

ಕಳೆದ ಎರಡು ದಶಕಗಳಿಂದ ಲಿಂಗೇಶ್ ಅವರು ರೈತ ಚಳುವಳಿಯೊಂದಿಗೆ ಉತ್ತಮ ಸಂಬಂಧ ಹೊಂದಿದ್ದು, ಬಯಲುಸೀಮೆ ಹಾಗೂ ಬೇಲೂರು ಭಾಗದ ನೀರಾವರಿ ಸಮಸ್ಯೆಗಳ ಪರಿಹಾರಕ್ಕಾಗಿ

» ನಾಲ್ಕನೇ ಪುಟದಲ್ಲಿ

## ಸೋನಿಯಾ ಗಾಂಧಿಯಿಂದ ಏನನ್ನು ನಿರೀಕ್ಷಿಸಲು ಸಾಧ್ಯ

# ಕಾಂಗ್ರೆಸ್ ಸಣ್ಣತನ ತೋರಿಸುವ ಅಗತ್ಯವಿಲ್ಲ : ಹೆಚ್.ಡಿ.ಕೆ.

• ಪ್ರಜೋದಯ ವರದಿ

**ಹೊಳೆನರಸೀಪುರ:** ಸರ್ಕಾರಿ ಕಾರ್ಯಕ್ರಮದಲ್ಲಿ ವಂದೇ ಮಾತರಂ ಗೀತೆಗೆ ಗೌರವ ಸಲ್ಲಿಸುವುದು ಕಡ್ಡಾಯವಾಗಿದ್ದು, ಅದನ್ನು ಎಲ್ಲಾ ಪಕ್ಷಗಳೂ ಗೌರವಿಸಬೇಕು. ಕಾಂಗ್ರೆಸ್ ನಾಯಕರು ಈ ವಿಚಾರದಲ್ಲಿ ಸಣ್ಣತನ ತೋರಿಸುವ ಅಗತ್ಯವಿಲ್ಲವೆಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು.

ಕಾಂಗ್ರೆಸ್ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ವಂದೇ ಮಾತರಂ ಗೀತೆಗೆ ಸಂಬಂಧಿಸಿದಂತೆ ನಡೆದಿರುವ ಘಟನೆ ಕುರಿತು ಪ್ರತಿಕ್ರಿಯಿಸಿದ ಅವರು, ಕುರ್ಚಿ ಹಾಕಲು ಸನ್ನೆ ಮಾಡಿದರೆಂಬ ಕಾರಣಕ್ಕೆ ಈ ವಿಚಾರವನ್ನು ಸಮರ್ಥಿಸಿಕೊಳ್ಳಲು ಸಾಧ್ಯವಿಲ್ಲ. ಜನರು ಎಲ್ಲವನ್ನೂ ಗಮನಿಸುತ್ತಿದ್ದಾರೆ. ಸತ್ಯವನ್ನು ಮರೆಮಾಚಿ ತಪ್ಪಿಸಿಕೊಳ್ಳುವುದು ಅಷ್ಟು ಸುಲಭವಲ್ಲ ಎಂದರು.

ಸೋನಿಯಾ ಗಾಂಧಿ ಅವರಿಂದ ಏನನ್ನು ನಿರೀಕ್ಷಿಸಲು ಸಾಧ್ಯ. ಅವರು ನಮ್ಮ ದೇಶದವರೇ, ಅವರು ಮದುವೆಯಾಗಿ ಭಾರತಕ್ಕೆ ಬಂದವರು. ಅವರ ರಕ್ತ ಹೆಚ್ಚು ಕಡಿಮೆ ಇರಬಹುದು. ವಂದೇ ಮಾತರಂ ದೇಶದ ಸ್ವಾತಂತ್ರ್ಯ ಹೋರಾಟದೊಂದಿಗೆ ಬೆಸೆದುಕೊಂಡಿರುವ ಗೀತೆ. ಸರ್ಕಾರಿ ಕಾರ್ಯ ಕ್ರಮದಲ್ಲಿ ಅದಕ್ಕೆ ಗೌರವ ಸಲ್ಲಿಸುವುದು ಎಲ್ಲರ ಕರ್ತವ್ಯ. ಕಾಂಗ್ರೆಸ್ ನಾಯಕರು ಈ ವಿಚಾರದಲ್ಲಿ ಸಣ್ಣತನ



ತೋರಿಸದೆ, ದೇಶದ ಭಾವನೆಗಳಿಗೆ ಗೌರವ ನೀಡಬೇಕೆಂದು ಹೇಳಿದರು.

ಮಹಾತ್ಮ ಗಾಂಧೀಜಿ ಭಾಗವಹಿಸಿದ್ದ ಕಾರ್ಯಕ್ರಮವೊಂದರಲ್ಲಿ ಮೊದಲ ಬಾರಿಗೆ ಸಾರ್ವಜನಿಕ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷದ ಸಭೆಯಲ್ಲೇ ವಂದೇ ಮಾತರಂ ಗೀತೆಯನ್ನು ಅಳವಡಿಸಿಕೊಳ್ಳಲಾಗಿತ್ತು ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

**ಹೆಚ್‌ಎಂಟಿ ಬಗ್ಗೆ ಜನರಲ್ಲಿ ಅಭಿಮಾನವಿದೆ**

ದೇಶದ ಹೆಮ್ಮೆಯ ಸಂಸ್ಥೆಯಾಗಿರುವ ಹೆಚ್‌ಎಂಟಿ ವಾಚ್‌ಗಳ ಬಗ್ಗೆ ಜನರಲ್ಲಿ ಇಂದಿಗೂ ಗೌರವ ಮತ್ತು ಅಭಿಮಾನ ಇದೆ ಎಂಬುದು ಸ್ವಾತಂತ್ರ್ಯ ದಿನದಂದು ವಾಚ್ ಖರೀದಿಸಲು ಯುವಕರು ಎರಡು ಕಿಲೋಮೀಟರ್‌ಗೂ ಹೆಚ್ಚು ಉದ್ದದ ಸರದಿ ಸಾಲಿನಲ್ಲಿ ನಿಂತಿರುವುದರಿಂದ ಸ್ಪಷ್ಟವಾಗಿದೆ ಎಂದು ಹೇಳಿದರು.

ಸ್ವಾತಂತ್ರ್ಯ ದಿನದಂದು ಒಂದೇ ದಿನದಲ್ಲಿ 35 ಲ.ರೂ. ಮೌಲ್ಯದ ಹೆಚ್‌ಎಂಟಿ ವಾಚ್‌ಗಳು ಮಾರಾಟವಾಗಿವೆ. ವಾಚ್ ಖರೀದಿಸಲು ಯುವಕರು ಉತ್ಸಾಹದಿಂದ ಸರದಿ ಸಾಲಿನಲ್ಲಿ ನಿಂತಿರುವುದು ಗಮನಾರ್ಹ. ಕಳೆದ ಎರಡು ವರ್ಷಗಳಿಂದ ಹೆಚ್‌ಎಂಟಿ ಸಂಸ್ಥೆಗೆ ಪುನರ್‌ಕಾಯಕಲ್ಪ ನೀಡಲು ಪ್ರಯತ್ನಿಸುತ್ತಿದ್ದೇನೆ. ಸಂಸ್ಥೆಯನ್ನು ಉಳಿಸಬೇಕೆಂಬುದು ನನ್ನ ದೃಢವಾದ ಅಭಿಪ್ರಾಯ. ಈ ಸಂಬಂಧ ಕೇಂದ್ರ ಹಣಕಾಸು ಸಚಿವರೊಂದಿಗೆ ಚರ್ಚೆ ನಡೆಸಿದ್ದು, ಸಂಸ್ಥೆಯ ಭವಿಷ್ಯದ ಕುರಿತು ಸೂಕ್ತ ತೀರ್ಮಾನ ಕೈಗೊಳ್ಳುವ ಪ್ರಯತ್ನ ನಡೆದಿದೆ ಎಂದು ಹೇಳಿದರು.

# ಬಿಜೆಪಿ ಪದಾಧಿಕಾರಿಗಳ ಪಟ್ಟಿ: ರಾಜ್ಯದ ಇಬ್ಬರಿಗೆ ಸ್ಥಾನ

• ಪ್ರಜೋದಯ ವರದಿ

**ನವದೆಹಲಿ:** ಮುಂಬರುವ ವಿವಿಧ ರಾಜ್ಯಗಳ ವಿಧಾನಸಭೆ ಚುನಾವಣೆಗಳ ಹಿನ್ನಲೆಯಲ್ಲಿ ಭಾರತೀಯ ಜನತಾ ಪಕ್ಷ (ಬಿಜೆಪಿ) ತನ್ನ ನೂತನ ಪದಾಧಿಕಾರಿಗಳ ಪಟ್ಟಿಯನ್ನು ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್ ಅವರು ಸೋಮವಾರ ಪ್ರಕಟಿಸಿದ್ದಾರೆ.

ಹಿರಿಯ ಹಾಗೂ ಯುವ ನಾಯಕರನ್ನು ಹೊಂದಿರುವ ಈ ಹೊಸ ಪಟ್ಟಿಯಲ್ಲಿ ಪ್ರಾದೇಶಿಕ ಪ್ರಾತಿನಿಧ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಈ ನೇಮಕ ತಕ್ಷಣದಿಂದಲೇ ಜಾರಿಗೆ ಬರಲಿದೆ ಎಂದು ಪಕ್ಷ ತಿಳಿಸಿದೆ.

ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ (ಸಂಘಟನಾ) ಬಿ.ಎಲ್. ಸಂತೋಷ್ ಅವರು ಮುಂದುವರೆದಿದ್ದಾರೆ. ಕರ್ನಾಟಕದ ಪ್ರೊ.ಎಂ.ನಾಗರಾಜ ಅವರಿಗೆ ರಾಷ್ಟ್ರೀಯ ಉಪಾಧ್ಯಕ್ಷ ಹುದ್ದೆಯ ಜವಾಬ್ದಾರಿ ನೀಡಲಾಗಿದೆ.

ಪಕ್ಷದ ಸಂಘಟನಾತ್ಮಕ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಲಾಗಿದ್ದು, ಮಾಜಿ ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರಿಗೆ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಜವಾಬ್ದಾರಿ ನೀಡಲಾಗಿದೆ. ಇನ್ನು ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ವಸುಂಧರಾ ರಾಜೇ ಅವರು ರಾಷ್ಟ್ರೀಯ ಉಪಾಧ್ಯಕ್ಷೆ ಯಾಗಿ ಮುಂದು ವರಿಯಲಿದ್ದಾರೆ.

ಪಕ್ಷದ ಪ್ರಮುಖ ಹುದ್ದೆಗಳಲ್ಲಿ ಮಹಿಳೆಯರಿಗೆ ಹೆಚ್ಚಿನ ಪ್ರಾತಿನಿಧ್ಯ ನೀಡಲಾಗಿದ್ದು, 13 ರಾಷ್ಟ್ರೀಯ ಉಪಾಧ್ಯಕ್ಷರ ಪೈಕಿ 6

## ಮಹಿಳೆಯರಿಗೆ ಪ್ರಾತಿನಿಧ್ಯ




ಸ್ಥಾನಗಳನ್ನು ಮಹಿಳೆಯರಿಗೆ ನೀಡಲಾಗಿದೆ. ಜೊತೆಗೆ ಒಬ್ಬರು ಪ್ರಧಾನ ಕಾರ್ಯದರ್ಶಿ ಹಾಗೂ ನಾಲ್ವರು ಕಾರ್ಯದರ್ಶಿ ಸ್ಥಾನಗಳಲ್ಲಿ ಸ್ಥಾನ ಪಡೆದಿದ್ದಾರೆ. ಈ ಪಟ್ಟಿಯಲ್ಲಿ ಇಬ್ಬರು ಮುಸ್ಲಿಂ ಸಮುದಾಯದ ನಾಯಕರಿಗೂ ಅವಕಾಶ ಕಲ್ಪಿಸಲಾಗಿದೆ. ದಕ್ಷಿಣ ಹಾಗೂ ಈಶಾನ್ಯ ರಾಜ್ಯಗಳ ಮೇಲೆ ವಿಶೇಷ ಗಮನ ಹರಿಸಲಾಗಿದ್ದು, ಕೇರಳ, ಪಶ್ಚಿಮ ಬಂಗಾಳ, ಒಡಿಶಾ ಮತ್ತು ಈಶಾನ್ಯ ರಾಜ್ಯಗಳ ನಾಯಕರಿಗೆ ಉಪಾಧ್ಯಕ್ಷ ಹಾಗೂ ಕಾರ್ಯದರ್ಶಿ ಹುದ್ದೆಗಳಲ್ಲಿ ಆದ್ಯತೆ ನೀಡಲಾಗಿದೆ.

ಎಎಪಿ ತೊರೆದಿದ್ದ ಸಂದೀಪ್ ಪಾಠಕ್ ಅವರಿಗೆ ರಾಷ್ಟ್ರೀಯ ಕಾರ್ಯದರ್ಶಿ ಜವಾಬ್ದಾರಿ ವಹಿಸಲಾಗಿದ್ದರೆ, ಸಂಬಿತ್ ಪಾತ್ರ ಅವರನ್ನು ಈಶಾನ್ಯ ರಾಜ್ಯಗಳ ಸಂಯೋಜಕರನ್ನಾಗಿ ನೇಮಿಸಲಾಗಿದೆ.

**ರಾಷ್ಟ್ರೀಯ ಉಪಾಧ್ಯಕ್ಷರು**

ವಸುಂಧರಾ ರಾಜೇ (ರಾಜಸ್ಥಾನ), ತೀರಥ್ ಸಿಂಗ್ ರಾವತ್ (ಉತ್ತರಾಖಂಡ), ರಾಮ್ ಮಾಧವ್ (ದೆಹಲಿ), ಬೈಜಯಂತ್ ಜಯ್ ಪಂಡಾ (ಒಡಿಶಾ), ಡಿ.ಪುರಂದೇಶ್ವರಿ (ಆಂಧ್ರಪ್ರದೇಶ), ರೇಖಾ ವರ್ಮಾ (ಉತ್ತರ ಪ್ರದೇಶ), ವರ್ಷಾಬೆನ್ ನರೇಂದ್ರಭಾಯಿ ದೋಶಿ (ಗುಜರಾತ್), ಡಾ.ಭಾರತಿ ಪ್ರವೀಣ್ ಪವಾರ್ (ಮಹಾರಾಷ್ಟ್ರ), ಸರ್ದಾರ್ ಮನಪ್ರೀತ್ ಸಿಂಗ್ ಬಾದಲ್ (ಪಂಜಾಬ್), ಲಾಲ್ ಸಿಂಗ್ ಆರ್ಯ (ಮಧ್ಯಪ್ರದೇಶ), ಪ್ರೊ.ಎಂ.ನಾಗರಾಜ (ಕರ್ನಾಟಕ), ಪ್ರೊ. ತಾರಿಖ್ ಮನ್ಸೂರ್ (ಉತ್ತರ ಪ್ರದೇಶ) ಹಾಗೂ ಡಾ.ಮಧುಚಂದ್ರಾ ಕರ್ (ಪಶ್ಚಿಮ ಬಂಗಾಳ) ರಾಷ್ಟ್ರೀಯ ಉಪಾಧ್ಯಕ್ಷರಾಗಿ ನೇಮಕಗೊಂಡಿದ್ದಾರೆ.

**ಪ್ರಧಾನ ಕಾರ್ಯದರ್ಶಿಗಳು**

ವಿನೋದ್ ತಾವ್‌ಡೆ, ಸುನಿಲ್ ಬನ್ಸಲ್, ಬಿಪ್ಲಬ್ ಕುಮಾರ್ ದೇವ್, ಸ್ಮೃತಿ ಇರಾನಿ, ಡಾ. ಸತೀಶ್ ಪೂನಿಯಾ, ಗಜೇಂದ್ರ ಪಟೇಲ್, ಹರೀಶ್ ದ್ವಿವೇದಿ ಮತ್ತು ಸಂಜಯ್ ಭಾಟಿಯಾ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ. ರಾಷ್ಟ್ರೀಯ ಕಾರ್ಯದರ್ಶಿಗಳಾಗಿ ಕೆ. ಸುರೇಂದ್ರನ್, ಅನಿಲ್ ಆಂಟೋನಿ, ರೋಹನ್ ಗುಪ್ತಾ ಸೇರಿ 16 ಜನರಿಗೆ ಜವಾಬ್ದಾರಿ ನೀಡಲಾಗಿದೆ.

**ಪ್ರಮುಖ ನೇಮಕಾತಿಗಳು**

ರಾಷ್ಟ್ರೀಯ ಖಜಾಂಚಿ: ಪಿಯೂಷ್ ಗೋಯಲ್, ರಾಷ್ಟ್ರೀಯ ಸಹ ಖಜಾಂಚಿ: ರಾಜೇಶ್ ಮಂಗಲ್, ಕೇಂದ್ರ ಕಚೇರಿ ಉಸ್ತುವಾರಿ: ತರುಣ್ ಚುಗ್, ಮಾಧ್ಯಮ ಸಂಚಾಲಕ: ಅನಿಲ್ ಬಲೂನಿ, ಸಾಮಾಜಿಕ ಜಾಲತಾಣ ಸಂಚಾಲಕ: ದೀಪಕ್ ಮ್ಹಾಸ್ಕಿ.

**ವಿವಿಧ ಮೋರ್ಚಾಗಳ ಅಧ್ಯಕ್ಷರು**

ಯುವ ಮೋರ್ಚಾ: ಡಾ.ಹೇಮಂಗ್ ಜೋಶಿ, ಮಹಿಳಾ ಮೋರ್ಚಾ: ರೂಪ್ ಕುಮಾರಿ ಚೌಧರಿ, ಒಬಿಸಿ ಮೋರ್ಚಾ: ಅಮರ್‌ಪಾಲ್ ಮೌರ್ಯ, ಕಿಸಾನ್ ಮೋರ್ಚಾ: ಬನ್ಸಿಲಾಲ್ ಗುರ್ಜರ್, ಎಸ್‌ಸಿ ಮೋರ್ಚಾ: ಶಿವೇಶ್ ಕುಮಾರ್ ರಾಮ್, ಎಸ್‌ಟಿ ಮೋರ್ಚಾ: ಡಾ. ಮನ್ನಾಲಾಲ್ ರಾವತ್, ಅಲ್ಪಸಂಖ್ಯಾತ ಮೋರ್ಚಾ: ಕುನ್ವರ್ ಬಾಸಿತ್ ಅಲಿ.

**ಬಿಜೆಪಿ ಉಪಾಧ್ಯಕ್ಷರು**

ಉಪಾಧ್ಯಕ್ಷರು: ಹಿಂದಿನ 11 ಜನರ ಬದಲಿಗೆ 13 ಜನರ ನೇಮಕ. ಹಿಂದೆ ಉಪಾಧ್ಯಕ್ಷರಾಗಿದ್ದ ನಾಲ್ವರನ್ನಷ್ಟೇ ಉಳಿಸಿಕೊಳ್ಳಲಾಗಿದೆ.

**ಹೊರಕ್ಕೆ:** ಸರೋಜ್ ಪಾಂಡೆ, ಲಕ್ಷ್ಮಿಕಾಂತ್ ವಾಜಪೇಯಿ.

**ಪ್ರಧಾನ ಕಾರ್ಯದರ್ಶಿಗಳು**

ಹಿಂದಿನ 6 ಜನರ ಬದಲಿಗೆ 8 ಜನರ ನೇಮಕ

**ಹೊರಕ್ಕೆ:** ಅರುಣ್ ಸಿಂಗ್, ರಾಧಾ ಮೋಹನ್ ದಾಸ್ ಅಗರವಾಲ್

**ರಾಷ್ಟ್ರೀಯ ಕಾರ್ಯದರ್ಶಿಗಳು**

**ಹೊರಕ್ಕೆ:** ಅರವಿಂದ್ ಮೆನನ್, ಸುರೇಂದ್ರ ನಾಗರ್

**ಖಜಾಂಚಿ:** ರಾಜೇಶ್ ಅಗರವಾಲ್ ಬದಲಿಗೆ ಪಿಯೂಷ್ ಗೋಯೆಲ್

**ಮಾಧ್ಯಮ ಸಂಚಾಲಕ:** ಅನಿಲ್ ಬಲೂನಿ

**ಸಾಮಾಜಿಕ ಮಾಧ್ಯಮ ಸಂಚಾಲಕ:** ಅಮಿತ್ ಮಾಳವೀಯಾ ಬದಲಿಗೆ ದೀಪಕ್ ಮ್ಹಸ್ಕಿ

**ಯುವ ಮೋರ್ಚಾ:** ತೇಜಸ್ವಿ ಸೂರ್ಯ ಬದಲಿಗೆ ಡಾ.ಹೇಮಾಂಗ್ ಜೋಶಿ

## ರೈತರಿಗಾಗಿ ಜೀವ ಇರುವವರೆಗೂ ಹೋರಾಟ



» ಮೊದಲನೇ ಪುಟದಿಂದ

ಹಲವು ಹೋರಾಟಗಳಲ್ಲಿ ಭಾಗ ವಹಿಸಿದ್ದಾರೆ. ಹಳೇಬೀಡು-ಮಾದಿಹಳ್ಳಿ ಏತ ನೀರಾವರಿ ಯೋಜನೆಗಾಗಿ ರೈತ ಸಂಘದ ನೇತೃತ್ವದಲ್ಲಿ ನಡೆದ ಹೋರಾಟವನ್ನು ಸ್ಮರಿಸಿದ ಅವರು, ಕೆರೆಯ ಮಧ್ಯಭಾಗದಲ್ಲೇ ಶಾಮಿಯಾನ ಹಾಕಿಕೊಂಡು ರೈತರೊಂದಿಗೆ ಹೋರಾಟ ನಡೆಸಲಾಗಿತ್ತು. ಆ ಹೋರಾಟಗಳ ಫಲವಾಗಿ ಹಳೇಬೀಡು, ಅಡಗೂರು ಸೇರಿ ಹಲವು ಭಾಗಗಳ ಕೆರೆಗಳಿಗೆ ನೀರು ದೊರೆಯುವಂತಾಗಿದೆ ಎಂದರು.

ರೈತ ಸಂಘದ ತಾಲ್ಲೂಕು ಅಧ್ಯಕ್ಷ ಭೋಗಮಲ್ಲೇಶ್, ಹೆಚ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಎಂ.ಎ. ನಾಗರಾಜು, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಎಂ.ಡಿ. ದಿನೇಶ್, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಬಲ್ಲೇನಹಳ್ಳಿ ರವಿಕುಮಾರ್, ಜೆಡಿಎಸ್ ಮುಖಂಡರಾದ ಅದ್ದೂರಿ ಚೇತನ್ ಕುಮಾರ್, ಲೋಕೇಗೌಡ, ಮಹದೇವ್ ಇದ್ದರು.

## ಹುಲಿಗಳ ಸ್ಪಿನ್ ಖೆಡ್ಡಾಗ ಬಿದ್ದ ಸಿಂಹಗಳು

• ಪ್ರಜೋದಯ ವರದಿ



**ಗಾಲ್:** ಭಾರತದ ಸ್ಪಿನ್ನರ್‌ಗಳಾದ ಮಾನವ್ ಸುತಾರ್ ಮತ್ತು ರವೀಂದ್ರ ಜಡೇಜ ಜೋಡಿ 7 ವಿಕೆಟ್‌ಗಳನ್ನು ಕಬಳಿಸುವ ಮೂಲಕ ಶ್ರೀಲಂಕಾದ ಸಿಂಹಗಳಿಗೆ ಖೆಡ್ಡಾ ತೋಡಿತು. ಇದರಿಂದಾಗಿ, ಆತಿಥೇಯ ತಂಡವು ಭಾರತ ವಿರುದ್ಧದ ಎರಡು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯದಲ್ಲಿ ತಂಡ ಇನಿಂಗ್ಸ್ ಹಿನ್ನಡೆ ಅನುಭವಿಸಿದೆ.

ಶನಿವಾರ ಆರಂಭವಾದ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ, ಕನ್ನಡಿಗರಾದ ದೇವದತ್ತ ಪಡಿಕ್ಕಲ್ (167 ರನ್), ಕೆ.ಎಲ್.ರಾಹುಲ್ (82) ಅಮೋಘ ಆಟದ ಬಲದಿಂದ ಮೊದಲ ಇನಿಂಗ್ಸ್‌ನಲ್ಲಿ 462 ರನ್ ಕಲೆಹಾಕಿತು. ಅದಕ್ಕೆ ಉತ್ತರವಾಗಿ ಮೂರನೇ ದಿನ ಬ್ಯಾಟಿಂಗ್ ಮಾಡಿದ ಲಂಕಾ ಪಡೆ 284 ರನ್ ಗಳಿಸಿ ಆಲೌಟ್ ಆಯಿತು.

**ಆಸರೆಯಾದ ದಿನುಶಾ-ಡಿಕ್ವೆಲ್ಲಾ**

ಕೇವಲ 90 ರನ್‌ಗಳಿಗೆ ಪ್ರಮುಖ ಐದು ವಿಕೆಟ್ ಕಳೆದುಕೊಂಡಿದ್ದ ಲಂಕಾ ಪಡೆಗೆ, ಸೊನಲ್ ದಿನುಶಾ ಮತ್ತು ನಿರೋಶಾನ್ ಡಿಕ್ವೆಲ್ಲಾ ಆಸರೆಯಾದರು. ಇವರಿಬ್ಬರು ಆರನೇ ವಿಕೆಟ್ ಪಾಲು ದಾರಿಕೆಯಲ್ಲಿ 146 ರನ್ ಸೇರಿಸಿದರು. ಅದರಿಂದಾಗಿ ಭಾರಿ ಮುನ್ನಡೆ ಸಾಧಿಸುವ ಅವಕಾಶ ಭಾರತದ ಕೈತಪ್ಪಿತು. ಇವರಿಬ್ಬರು ಔಟಾದ ನಂತರ ಉಳಿದ ಆಟಗಾರರು ಹೆಚ್ಚುಹೊತ್ತು ನಿಲ್ಲಲಿಲ್ಲ. ಧನಂಜಯ ಡಿ ಸಿಲ್ವಾ ಪಡೆ ಸರ್ವಪತನ ಕಾಣುವುದರೊಂದಿಗೆ ಮೂರನೇ ದಿನದಾಟಕ್ಕೆ ತೆರೆ ಬಿದ್ದಿತು.

ಆತಿಥೇಯರನ್ನು ಕಾಡಿದ ಸುತಾರ್ 21.4 ಓವರ್‌ಗಳಲ್ಲಿ 76 ರನ್ ನೀಡಿ ನಾಲ್ಕು ವಿಕೆಟ್ ಕಬಳಿಸಿದರು. ಅವರಿಗೆ ಜೊತೆಯಾದ ಅನುಭವಿ ಜಡೇಜ 21 ಓವರ್‌ಗಳಲ್ಲಿ 57 ರನ್ ಬಿಟ್ಟುಕೊಟ್ಟು ಮೂರು ವಿಕೆಟ್ ಕಿತ್ತರು. ವೇಗಿಗಳಾದ ಮೊಹಮ್ಮದ್ ಸಿರಾಜ್, ಪ್ರಸಿದ್ಧ ಕೃಷ್ಣ ಹಾಗೂ ಕುಲದೀಪ್ ಯಾದವ್ 1 ವಿಕೆಟ್ ಉರುಳಿಸಿದರು.

## ನಾಗೇಂದ್ರ ರಾಜೀನಾಮೆಗೆ ಪಟ್ಟು: ಕಲಾಪ ಕೋಲಾಹಲ

» ಮೊದಲನೇ ಪುಟದಿಂದ

ಬಿಜೆಪಿ ಮತ್ತು ಜೆಡಿಎಸ್ ಶಾಸಕರು ತಮ್ಮ ಸ್ಥಾನಗಳಲ್ಲಿ ಎದ್ದುನಿಂತು ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಪಟ್ಟು ಹಿಡಿದರು.

ಈ ವೇಳೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಆಕ್ಷೇಪ ವ್ಯಕ್ತಪಡಿಸಿ ಮಾತನಾಡಲು ಮುಂದಾದರು. ಬಿಜೆಪಿ ಶಾಸಕರು ಘೋಷಣೆಗಳನ್ನು ಮತ್ತಷ್ಟು ತೀವ್ರಗೊಳಿಸಿ ಸಚಿವರನ್ನು ವಜಾಗೊಳಿಸಲೇಬೇಕೆಂದು ಒತ್ತಾಯಿಸಿದರು.

ಗದ್ದಲದ ನಡುವೆ ಮಾತನಾಡಿದ ಕೃಷ್ಣ ಬೈರೇಗೌಡ, ನಿಯಮಾವಳಿಗಳನ್ನು ಉಲ್ಲೇಖಿಸಿ, ಯಾವುದೇ ಸಚಿವರ ವಿರುದ್ಧ ಸುಖಾಸುಮ್ಮನೆ ಆರೋಪ ಮಾಡಲು ಅವಕಾಶ ನೀಡಬಾರದು. ಈ ವಿಚಾರದಲ್ಲಿ ಸಭಾಧ್ಯಕ್ಷರು ರೂಲಿಂಗ್ ನೀಡಬೇಕೆಂದು ಒತ್ತಾಯಿಸಿದರು.

ಗೂಂಡಾ ವರ್ತನೆಗೆ ಅವಕಾಶ ನೀಡಬಾರದು. ಸದನದ ಮೇಲೆ ದಬ್ಬಾಳಿಕೆ ನಡೆಸಲು ಅವಕಾಶ ನೀಡದೆ ಕಡಿವಾಣ ಹಾಕಬೇಕೆಂದು ಅವರು ಆಗ್ರಹಿಸಿದರು. ಇದಕ್ಕೆ ಆಡಳಿತ ಪಕ್ಷದ ಹಲವು ಸದಸ್ಯರು ಬಿಜೆಪಿ ನಿಲುವನ್ನು ವಿರೋಧಿಸಿ ಎದ್ದು ನಿಂತು ಮಾತನಾಡಲು ಮುಂದಾದರು. ಗದ್ದಲ ಮತ್ತು ಗೊಂದಲದಿಂದಾಗಿ ಸದನದಲ್ಲಿ ಏನೂ ಕೇಳದ ಪರಿಸ್ಥಿತಿ ನಿರ್ಮಾಣವಾಯಿತು.

ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ್ ಮಾತನಾಡಿ, ಮಾತನಾಡಲು ನಿಮಗೆ ನೈತಿಕ ಹಕ್ಕಿಲ್ಲ. ಸದನ ನಡೆಸಲು ನಿಮಗೆ ಇಷ್ಟವಿಲ್ಲವೆಂದು ಪ್ರತಿಪಕ್ಷದ ಸದಸ್ಯರನ್ನು ಛೇಡಿಸಿದರು. ಮತ್ತೆ ಅಶೋಕ್ ಮಾತನಾಡಿ, ಸಚಿವರು ರಾಜೀನಾಮೆ ನೀಡಿದ ಬಳಿಕವೇ ಈ ಕುರಿತು ಚರ್ಚೆ ನಡೆಸೋಣವೆಂದು ಹೇಳಿದರು. ಸಭಾಧ್ಯಕ್ಷರ ಮನವಿಗೂ ಯಾರೂ ಕಿವಿಗೊಡದ ಹಿನ್ನೆಲೆಯಲ್ಲಿ ಸದನದ ಕಾರ್ಯಕಲಾಪವನ್ನು ಕೆಲಕಾಲ ಮುಂದೂಡಲಾಯಿತು.

**ವಿಧಾನಪರಿಷತ್‌ನಲ್ಲಿ ಬಿಜೆಪಿ-ಕಾಂಗ್ರೆಸ್ ವಾಕ್ಸಮರ**

ಕಾಂಗ್ರೆಸ್‌ನ ರಾಯರೆಡ್ಡಿ ಮಾತನಾಡುತ್ತಿದ್ದ ಸಂದರ್ಭದಲ್ಲಿ ಬಿಜೆಪಿ ಸದಸ್ಯರು, ಮೊದಲು ನಾಗೇಂದ್ರ ಅವರು ರಾಜೀನಾಮೆ, ನಂತರ ಕಲಾಪ ಎಂದು ಘೋಷಣೆ ಕೂಗಿದರು. ಇದರಿಂದ ಸದನದಲ್ಲಿ ಕೆಲಕಾಲ ಗದ್ದಲ ಉಂಟಾಯಿತು. ಬಿಜೆಪಿ ನಾಯಕರ ಒತ್ತಾಯಕ್ಕೆ ಪ್ರತಿಕ್ರಿಯಿಸಿದ ಸಚಿವ ಯು.ಟಿ. ಖಾದರ್, ಪ್ರಕರಣದಲ್ಲಿ ಈಗಾಗಲೇ ನ್ಯಾಯಾಲಯದ ತೀರ್ಪು ಬಂದಿರುವುದನ್ನು ಉಲ್ಲೇಖಿಸಿ, ನ್ಯಾಯಾಲಯಕ್ಕಿಂತ ತಾವು ದೊಡ್ಡವರೇ ಎಂಬ ರೀತಿಯಲ್ಲಿ ಪ್ರತಿಪಕ್ಷದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನಾಗೇಂದ್ರ ಅವರಿಗೆ ಪ್ರಕರಣದಲ್ಲಿ ಕ್ಲೀನ್‌ಚಿಟ್ ಸಿಕ್ಕಿಲ್ಲ ಎಂದು ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿಕೆ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಸಿಐಡಿ ತನಿಖೆಯಲ್ಲಿ ನಾಗೇಂದ್ರ ಅವರಿಗೆ ಕ್ಲೀನ್‌ಚಿಟ್ ಸಿಕ್ಕಿದೆ ಎಂದು ತಿರುಗೇಟು ನೀಡಿದರು.

## ಆ.29ರಿಂದ ರಾಯರ ಆರಾಧನಾ ಮಹೋತ್ಸವ




• ಪ್ರಜೋದಯ ವರದಿ

**ಹಾಸನ:** ನಗರದ ಉತ್ತರ ಬಡಾವಣೆಯಲ್ಲಿರುವ ರಾಘವೇಂದ್ರ ಸ್ವಾಮಿ ಮಠದಲ್ಲಿ ಶ್ರೀ ಗುರು ರಾಘವೇಂದ್ರ ತೀರ್ಥರ 355ನೇ ಆರಾಧನಾ ಮಹೋತ್ಸವವನ್ನು ಆ.29 ರಿಂದ 31 ರ ವರೆಗೆ ಹಮ್ಮಿಕೊಳ್ಳಲಾಗಿದೆಂದು ಮಠದ ಎಂ.ಕೆ.ಪ್ರಕಾಶ್ ಅವರು ತಿಳಿಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂತ್ರಾಲಯದ ಧಾರ್ಮಿಕ ಪರಂಪರೆಯಂತೆ ಹಾಗು ಮಠದ ಪೀಠಾಧಿಪತಿಗಳಾದ ಪರಮಪೂಜ್ಯ 1008 ಶ್ರೀಸುಬುಧೇಂದ್ರ ತೀರ್ಥರ ಕೃಪಾಶೀರ್ವಾದ ದೊಂದಿಗೆ ಆರಾಧನಾ ಮಹೋತ್ಸವ ಆಯೋಜಿಸಲಾಗಿದೆ. ಆರಾಧನಾ ಮಹೋತ್ಸವಕ್ಕೂ ಮುನ್ನ ಆ.28 ರಂದು ಬೆಳಿಗ್ಗೆ 6 ಗಂಟೆಗೆ ಧ್ವಜಾರೋಹಣದೊಂದಿಗೆಚಾಲನೆ ದೊರೆಯಲಿದೆ.ಪ್ರಾರ್ಥನಾಪೂಜೆ, ಗೋಪೂಜೆ, ಕಂಕಣಬಂಧನ, ಫಲ-ತಾಂಬೂಲಪ್ರಸಾದ ವಿನಿಯೋಗ ಹಾಗೂ ಮಹಾಮಂಗಳಾರತಿ ನಡೆಯಲಿದೆ.

ಆ.29ರಂದು ಪೂರ್ವಾರಾಧನೆ ನಡೆಯಲಿದ್ದು, ಆ.30ರಂದು ಶ್ರಾವಣ ಕೃಷ್ಣ ದ್ವಿತೀಯ ದಂದು ಮಧ್ಯಾರಾಧನೆ ನೆರವೇರಲಿದೆ. ಮಧ್ಯಾರಾಧನೆಯ ದಿನವನ್ನು ಪ್ರಮುಖ ದಿನವನ್ನಾಗಿ ಆಚರಿಸಲಾಗುತ್ತದೆ. ಮಧ್ಯಾಹ್ನ 12 ಗಂಟೆಯಿಂದ ಭಕ್ತರಿಗೆ ನಿರಂತರ ಮಹಾ ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ. ಅನ್ನಪೂರ್ಣೇಶ್ವರಿ ಪ್ರಸಾದ ವಿನಿಯೋಗದ ಮೂಲಕ ಸಾವಿರಾರು ಭಕ್ತರಿಗೆ ಪ್ರಸಾದ ವಿತರಿಸುವ ವ್ಯವಸ್ಥೆ ಮಾಡಲಾಗಿದೆ. ಆ.31ರಂದು ಶ್ರಾವಣ ಕೃಷ್ಣ ತೃತೀಯಯಂದು ಉತ್ತರಾರಾಧನೆ ಹಾಗೂ ಮಹಾರಥೋತ್ಸವ ನಡೆಯಲಿ ದೆಂದು ತಿಳಿಸಿದರು. ಮಠದ ವ್ಯವಸ್ಥಾಪಕ ಗುರುರಾಜ ಆಚಾರ್ಯ, ವೈಶಾಖ್, ರಂಜಿತ್ ಗೊರೂರು, ಬಿ.ಜಿ.ಪ್ರಸಾದ್, ಹರೀಶ್ ಇದ್ದರು.

## ಜೆಇಇ ಪರೀಕ್ಷೆಯಲ್ಲಿ ಯುವರಾಜ್ ಸಾಧನೆ

• ಪ್ರಜೋದಯ ವರದಿ



**ಹಾಸನ:** ನಗರದ ಪ್ರತಿಷ್ಠಿತ ಸ್ಟೂಡೆಂಟ್ಸ್ ಪಿಯು ಕಾಲೇಜಿನ ವಿದ್ಯಾರ್ಥಿ ಎಸ್.ಕೆ. ಯುವರಾಜ್ ಅವರು 2026ನೇ ಸಾಲಿನಜೆಇಇ ಮುಖ್ಯ ಹಾಗೂ ಜೆಇಇ ಅಡ್ವಾನ್ಸ್ ಅರ್ಹತಾ ಪರೀಕ್ಷೆ ಗಳಲ್ಲಿ ಉತ್ತಮ ಸಾಧನೆ ಮಾಡಿ, ಪುಣೆಯ ಪ್ರತಿಷ್ಠಿತ ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆಯಲ್ಲಿ ಪ್ರವೇಶ ಪಡೆದಿದ್ದಾರೆ.

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ನಡೆಸಿದ ದೇಶದ ಪ್ರತಿಷ್ಠಿತ ಜೆಇಇ ಪರೀಕ್ಷೆಗಳಲ್ಲಿ ಗಮನಾರ್ಹ ಶ್ರೇಣಿ ಗಳಿಸಿರುವ ಯುವರಾಜ್ ಅವರ ಸಾಧನೆ, ನಿರಂತರ ಪರಿಶ್ರಮ, ಏಕಾಗ್ರತೆ ಹಾಗು ಶೈಕ್ಷಣಿಕ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಕಾಲೇಜು ಆಡಳಿತ ಮಂಡಳಿ ತಿಳಿಸಿದೆ. ಯುವರಾಜ್ ಅವರ ಸಾಧನೆಗೆ ಕಾಲೇಜಿನ ಅಧ್ಯಕ್ಷ ಮುರಳಿ ಮೋಹನ್, ಕಾರ್ಯದರ್ಶಿ ರೇಖಾ ಮುರಳಿ ಮೋಹನ್, ಪ್ರಾಂಶುಪಾಲರುಹಾಗು ಉಪನ್ಯಾಸಕ ವರ್ಗ ಹರ್ಷ ವ್ಯಕ್ತಪಡಿಸಿದೆ.

## ಪೌರ ಸಿಬ್ಬಂದಿ ರಕ್ಷಣಾತ್ಮಕ ಸಾಮಾಗ್ರಿ ಬಳಸಲಿ



• ಪ್ರಜೋದಯ ವರದಿ

**ಅರಸೀಕೆರೆ:** ನಗರದ ಸ್ವಚ್ಛತೆ ಕಾಪಾಡುವಲ್ಲಿ ಸೇನಾನಿಗಳಂತೆ ಕಾರ್ಯನಿರ್ವಹಿಸುತ್ತಿರುವ ಪೌರ ಸಿಬ್ಬಂದಿ ನಗರಸಭೆ ಯಿಂದ ಒದಗಿಸಿರುವ ರಕ್ಷಣಾತ್ಮಕ ಸಾಮಗ್ರಿಗಳನ್ನು ಪ್ರತಿ ದಿನ ಕಡ್ಡಾಯವಾಗಿ ಬಳಸಿಕೊಂಡು ತಮ್ಮ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕೆಂದು ನಗರಸಭೆ ಪೌರಾ ಯುಕ್ತ ಹೆಚ್.ಟಿ. ಕೃಷ್ಣಮೂರ್ತಿ ಅವರು ಹೇಳಿದರು.

ನಗರಸಭೆ ಆವರಣದಲ್ಲಿ ಪುರುಷ ಹಾಗು ಮಹಿಳಾ ಪೌರ ಸಿಬ್ಬಂದಿಗೆ ಗುಣಮಟ್ಟದ ಶೂ, ಕೈಗವಸು, ಮುಖ ಗವಸು ಸೇರಿ ವಿವಿಧ ರಕ್ಷಣಾತ್ಮಕ ಸಾಮಾಗ್ರಿಗಳನ್ನು ವಿತರಿಸಿ ಮಾತನಾಡಿದ ಅವರು, ನಗರವನ್ನು ಸ್ವಚ್ಛವಾಗಿ ಡುವುದು ನಾಗರಿಕರ ಕರ್ತವ್ಯ. ಪ್ರತಿದಿನ ಮುಂಜಾನೆ ಯಿಂದಲೇ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಪೌರ ಸಿಬ್ಬಂದಿ ನಗರಸಭೆಯ ಪ್ರಮುಖ ಆಸ್ತಿ. ಅವರ ದೈಹಿಕ ಹಾಗು ಮಾನಸಿಕ ಆರೋಗ್ಯದ ಬಗ್ಗೆ ಪೌರಾಡಳಿತ ಕಾಳಜಿ ವಹಿಸುತ್ತಿದೆ ಎಂದರು.

ಕೇವಲ ದಾಖಲೆಗಾಗಿ ಸಾಮಾಗ್ರಿಗಳನ್ನು ವಿತರಿಸುತ್ತಿಲ್ಲ. ಸಿಬ್ಬಂದಿಯ ಆರೋಗ್ಯ ಮತ್ತು ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡೇ ಅಗತ್ಯ ವಸ್ತುಗಳನ್ನು ಪೂರೈಸಲಾಗುತ್ತಿದೆ. ಸಿಬ್ಬಂದಿ ತಾವು ಕಾರ್ಯನಿರ್ವಹಿಸುವ ಸ್ಥಳಗಳಲ್ಲಿ ನೀಡಿ ರುವ ರಕ್ಷಣಾತ್ಮಕ ಸಾಮಗ್ರಿಗಳನ್ನು ಕಡ್ಡಾಯ ವಾಗಿ ಬಳಸಿ ಕೊಂಡು ಸದುಪಯೋಗಪಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಸಾಮಾಗ್ರಿಗಳು ಹಾಳಾದಲ್ಲಿ ಹೊಸದಾಗಿ ವಿತರಿಸಲು ಹೆಚ್ಚುವರಿ ಸಾಮಗ್ರಿಗಳನ್ನು ದಾಸ್ತಾನು ಮಾಡಲಾಗಿದೆ. ಸಿಬ್ಬಂದಿಯ ಆರೋಗ್ಯ ಹಾಗೂ ಸುರಕ್ಷತೆಯ ವಿಚಾರದಲ್ಲಿ ನಗರಸಭೆ ಸದಾ ಕಾಳಜಿ ವಹಿಸಲಿದೆ. ಅಧಿಕಾರಿಗಳು ಸಿಬ್ಬಂದಿಯೊಂದಿಗೆ ಇರಲಿದ್ದಾರೆ. ಆರೋಗ್ಯ ಮತ್ತು ಸ್ವಯಂ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಮನವಿ ಮಾಡಿದರು.

ಹಿರಿಯ ಆರೋಗ್ಯ ನಿರೀಕ್ಷಕರಾದ ಲಿಂಗರಾಜು, ರೇವಣ್ಣಸಿದ್ದಪ್ಪ, ಮಂಜುನಾಥ್ ಸೇರಿ ಪುರುಷ ಹಾಗು ಮಹಿಳಾ ಪೌರ ಸಿಬ್ಬಂದಿ ಇದ್ದರು.

## ಎಸ್‌ಸಿ-ಎಸ್‌ಟಿಗೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸ್ಥಾನ ನೀಡಲು ಒತ್ತಾಯ

• ಪ್ರಜೋದಯ ವರದಿ




**ಹಾಸನ:** ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನವನ್ನು ಈ ಬಾರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಕ್ಕೆ ನೀಡಬೇಕೆಂದು ಕಾಂಗ್ರೆಸ್ ಎಸ್ಸಿ-ಎಸ್ಟಿ ಘಟಕದ ಮಾಜಿ ಸಹ ಸಂಚಾಲಕ ರತನ್ ಅವರು ಒತ್ತಾಯಿಸಿದರು.

ಸೋಮವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಸುಮಾರು 5 ಲಕ್ಷದಷ್ಟು ಪರಿಶಿಷ್ಟ ಜಾತಿ-ಪಂಗಡದವರಿದ್ದಾರೆ. ಪಕ್ಷದ ಸಂಘಟನೆ ಹಾಗೂ ಗೆಲುವಿಗೆ ನಿರಂತರ ವಾಗಿ ಬೆಂಬಲ ನೀಡುತ್ತಿರುವ ಎಸ್‌ಸಿ-ಎಸ್‌ಟಿ ಸಮುದಾಯಕ್ಕೆ ಈ ಬಾರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ನೀಡಬೇಕು. ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್, ಮಾಜಿ ಸಚಿವ ಬಿ.ಶಿವರಾಂ ಸೇರಿ ರಾಜ್ಯ ಹಾಗು ರಾಷ್ಟ್ರ ಮಟ್ಟದ ಕಾಂಗ್ರೆಸ್ ನಾಯಕರು ಗಂಭೀರವಾಗಿ ಪರಿಗಣಿಸ ಬೇಕೆಂದು ಆಗ್ರಹಿಸಿದರು.

ಜಿಲ್ಲಾ ಕಾಂಗ್ರೆಸ್ ಇತಿಹಾಸದಲ್ಲಿ ಬಹುತೇಕ ಸಮುದಾಯದವರಿಗೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸ್ಥಾನ ನೀಡಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ಮುಖಂಡರಿಗೆ ಪ್ರಾತಿನಿಧ್ಯ ನೀಡಿಲ್ಲ. ಆರಂಭದಿಂದಲೂ ಪರಿಶಿಷ್ಟರು ಪಕ್ಷಕ್ಕೆ ಬೆನ್ನೆಲುಬಾಗಿ ನಿಂತಿದ್ದಾರೆ. ಉದ್ದೇಶದಿಂದಲೋ, ತುಳಿ ಯುವ ಕಾರಣ ದಿಂದಲೋ ಸಮುದಾಯಕ್ಕೆ ಅವಕಾಶ ನೀಡದಿರುವುದು ಬೇಸರ ತರಿಸಿದೆ. ಜಿಲ್ಲೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ನಿಭಾಯಿಸುವ ಹಲವುನಾಯಕರಿದ್ದಾರೆ.ಈಗಾಗಲೇ ಐದಾರು ಮಂದಿ ಅರ್ಜಿ ಹಾಕಿದ್ದು, ಅವರಿಗೆ ಅವಕಾಶ ನೀಡಬೇಕೆಂದು ಮನವಿ ಮಾಡಿದರು.

ಮೀಸಲು ಕ್ಷೇತ್ರದಲ್ಲೂ ಜಿಲ್ಲೆಯ ದಲಿತರ ಬದಲಿಗೆ ಬೇರೆ ಕ್ಷೇತ್ರದವರಿಗೆ ಮಣೆ ಹಾಕಿದ ಕಾರಣದಿಂದಲೇ 2018 ಮತ್ತು 2023ರಲ್ಲಿ ಸಕಲೇಶಪುರದಲ್ಲಿ ಪಕ್ಷ ಸೋತಿದೆ. ಮುಂದಾದರೂ ಕಾಂಗ್ರೆಸ್ ನಾಯಕರು ಎಚ್ಚೆತ್ತುಕೊಂಡು ಜಿಲ್ಲೆಯ ಎಸ್‌ಸಿ-ಎಸ್‌ಟಿ ಸಮುದಾಯಕ್ಕೆ ಸೂಕ್ತ ಸ್ಥಾನಮಾನ ನೀಡಬೇಕು. ಇಲ್ಲದಿದ್ದರೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಪ್ರವಾಸ ಮಾಡಿ ದಲಿತ ಸಮುದಾಯಕ್ಕೆ ಆಗುತ್ತಿರುವ ಅನ್ಯಾಯ ಕುರಿತು ಜಾಗೃತಿ ಮೂಡಿಸಲಾಗುವುದೆಂದು ಎಚ್ಚರಿಸಿದರು.

ಮುಖಂಡರಾದ ವಿಜಯ್ ಕುಮಾರ್, ಮಲ್ಲೇಶ್, ಕೃಷ್ಣಪ್ಪ ಇದ್ದರು.

## ಅರಸು ಜನ್ಮದಿನಾಚರಣೆ ಯಶಸ್ವಿಗೆ ತಹಶೀಲ್ದಾರ್ ಕರೆ

• ಪ್ರಜೋದಯ ವರದಿ



**ಆಲೂರು:** ಮಾಜಿ ಮುಖ್ಯಮಂತ್ರಿ, ಹಿಂದುಳಿದ ವರ್ಗಗಳ ಆಶಾಕಿರಣರಾಗಿದ್ದ ಡಿ. ದೇವರಾಜ ಅರಸು ಅವರ 111ನೇ ಜನ್ಮದಿನ ಆಚರಣೆ ಮಾಡಲುತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಪೂರ್ವಭಾವಿ ಸಭೆ ನಡೆಯಿತು.

ತಹಶೀಲ್ದಾರ್ ಎಚ್.ಮಲ್ಲಿಕಾರ್ಜುನ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ದೇವರಾಜ ಅರಸು ದಿನಾಚರಣೆ ಕಾರ್ಯಕ್ರಮದ ರೂಪುರೇಷೆಗಳ ಕುರಿತು ಚರ್ಚಿಸಲಾಯಿತು. ಕಾರ್ಯ ಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಹಾಗು ದೇವರಾಜ ಅರಸು ಅವರ ಅಭಿಮಾನಿ ಗಳು ಆಗಮಿಸುವಂತೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕೆಂದು ತಹಶೀಲ್ದಾರ್ ಸೂಚಿಸಿದರು. ಕರ ಪತ್ರ ಹಾಗೂ ಮಾಧ್ಯಮಗಳ ಮೂಲಕ ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಬೇಕೆಂದರು.

ಪಟ್ಟಣದಲ್ಲಿ ದೇವರಾಜ ಅರಸು ಅವರ ಭಾವಚಿತ್ರವಿರುವ ಫಲಕಗಳನ್ನು ಅಳವಡಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಚಂದ್ರಶೇಖರ್ ಅವರಿಗೆ ಸೂಚಿಸಿದರು. ಕಾರ್ಯಕ್ರಮ ವನ್ನು ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಆಯೋಜಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

**ಭವನ ನಿರ್ಮಾಣಕ್ಕೆ ನಿವೇಶನಕ್ಕೆ ಮನವಿ**

ಸಭೆಯಲ್ಲಿ ಹಿಂದುಳಿದ ವರ್ಗಗಳ ಮುಖಂಡ ಬಿ.ಸಿ.ಶಂಕರಾಚಾರ್ ಅವರು ಮಾತನಾಡಿ, ತಾಲ್ಲೂಕಿನ ಹಿಂದುಳಿದ ವರ್ಗಗಳು, ವಿವಿಧ ಸಮುದಾಯಗಳು, ಪ್ರಗತಿಪರ ಚಿಂತಕರು ಹಾಗೂ ಸಾರ್ವಜನಿಕರ ಬಹುದಿನಗಳ ಬೇಡಿಕೆಯಾಗಿರುವ ಡಿ.ದೇವರಾಜ ಅರಸು ಭವನ ನಿರ್ಮಾಣಕ್ಕೆ ನಿವೇಶನದ ಅಗತ್ಯವಿದೆ. ಪಟ್ಟಣದ ಹೃದಯ ಭಾಗದಿಂದ ಒಂದು ಕಿ.ಮೀ. ವ್ಯಾಪ್ತಿಯೊಳಗೆ ಸೂಕ್ತ ನಿವೇಶನ ಗುರುತಿಸಿ ಮಂಜೂರು ಮಾಡಬೇಕೆಂದು ತಹಶೀಲ್ದಾರ್ ಅವರಿಗೆ ಮನವಿ ಮಾಡಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್, ಸಿಡಿಪಿಒ ದಿನೇಶ್, ಬಿಸಿಎಂ ಅಧಿಕಾರಿ ಚಂದ್ರಶೇಖರ್, ಟಿಎಚ್‌ಒ ಡಾ.ಸ್ನೇಹಾ, ನಿವೃತ್ತ ಶಿಕ್ಷಕ ಕೆ.ಬಿ.ಗುರುಮೂರ್ತಿ, ಅರಸಪ್ಪ ಉಪಸ್ಥಿತರಿದ್ದರು.

## ಆ.28ರೊಳಗೆ ಸರ್ಕಾರಿ ಶಾಲಾ ಮಕ್ಕಳಿಗೆ ಶೂ, ಸಾಕ್ಸ್ ವಿತರಣೆ

• ಪ್ರಜೋದಯ ವರದಿ

**ಬೆಂಗಳೂರು:** ಸರ್ಕಾರಿ ಶಾಲೆಗಳಲ್ಲಿ ಒಂದರಿಂದ 10ನೇ ತರಗತಿವರೆಗೆ ಓದುತ್ತಿರುವ ಎಲ್ಲಾ ಮಕ್ಕಳಿಗೆ ವಿದ್ಯಾ ವಿಕಾಸ ಯೋಜನೆಯಡಿ ಆ.28 ರೊಳಗೆ ಶೂ ಮತ್ತು ಸಾಕ್ಸ್‌ಗಳನ್ನು ವಿತರಿಸಲಾಗುವುದೆಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್‌ನ ಬಲ್ಕೀಸ್ ಬಾನು ಪ್ರಶ್ನೆಗೆ ಉತ್ತರಿಸಿದ ಸಚಿವರು, ಒಟ್ಟು 36,61,267 ಶೂ ಮತ್ತು ಸಾಕ್ಸ್‌ಗಳ ಖರೀದಿಗೆ ಟೆಂಡರ್ ಕರೆಯಲಾಗಿತ್ತು. ಸಾಗಣೆಯಲ್ಲಿ ವಿಳಂಬ, ಅಳತೆ ವ್ಯತ್ಯಾಸದಿಂದಾಗಿ ಕೆಲವು ಕಡೆ ಇನ್ನೂ ಪೂರೈಕೆಯಾಗಿಲ್ಲ ಎಂದರು.

2,09,440 ಶೂ ಮತ್ತು ಸಾಕ್ಸ್‌ಗಳು ಉತ್ಪಾದನೆ ಹಂತದಲ್ಲಿವೆ. ಟೆಂಡರ್ ಪ್ರಕಾರ ಪೂರೈಸದೆ ವಿಳಂಬ ಮಾಡಿ ದ್ದಕ್ಕೆ ದಂಡ ಹಾಕಲಾಗಿದೆ. ಇನ್ನೂ ಏನಾದರೂ ನ್ಯೂನತೆಗಳು ಆಗಿದ್ದರೆ ನೋಟಿಸ್ ನೀಡಿ, ಕ್ರಮಕೈಗೊಳ್ಳಲಾಗುವುದು. ಮುಂದಿನ ವರ್ಷದಿಂದ ನಿಗದಿತ ಅವಧಿಯಲ್ಲೇ ಪೂರೈಕೆ ಮಾಡಲಾಗುವುದೆಂದು ಭರವಸೆ ನೀಡಿದರು.

### ಯುವ ಸ್ವಾತಂತ್ರ್ಯೋತ್ಸವದಲ್ಲಿ ಪ್ರದೀಪ್ ರಾಮಸ್ವಾಮಿ

## ವಿದ್ಯಾರ್ಥಿಗಳು ಜ್ಞಾನ ಗಳಿಕೆಗೆ ಹೆಚ್ಚು ಒತ್ತು ನೀಡಿ

• ಪ್ರಜೋದಯ ವರದಿ



**ಅರಕಲಗೂಡು:** ವಿದ್ಯಾರ್ಥಿಗಳು ಜ್ಞಾನ ಗಳಿಕೆಗೆ ಹೆಚ್ಚು ಒತ್ತು ನೀಡಿ ಗುರಿ ಸಾಧಿಸಬೇಕೆಂದು ಸ್ವಸ್ಥ ಸಮಾಜ ನಿರ್ಮಾಣ ಸಮಿತಿ ಅಧ್ಯಕ್ಷ ಪ್ರದೀಪ್ ರಾಮಸ್ವಾಮಿ ಅವರು ತಿಳಿಸಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ಸ್ವಸ್ಥ ಸಮಾಜ ನಿರ್ಮಾಣ ಸಮಿತಿ ಸಹಯೋಗದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಯುವ ಸ್ವಾತಂತ್ರ್ಯೋತ್ಸವ, ಪ್ರಬಂಧ ಸ್ಪರ್ಧೆ ಹಾಗೂ ಚರ್ಚಾ ಸ್ಪರ್ಧೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಭವಿಷ್ಯದಲ್ಲಿ ಏನಾಗಬೇಕೆಂಬುದನ್ನು ಮೊದಲೇ ನಿರ್ಧರಿಸಿಕೊಂಡು ಆ ಗುರಿ ಸಾಧನೆಗೆ ನಿರಂತರ ಪ್ರಯತ್ನ ಮಾಡಬೇಕು. ವಿದ್ಯಾರ್ಥಿ ಜೀವನ ದಲ್ಲಿ ಪಠ್ಯ ವಿಷಯಗಳ ಜೊತೆಗೆ ಸಮಾಜ, ದೇಶ, ವಿಜ್ಞಾನ, ತಂತ್ರಜ್ಞಾನ ಸೇರಿ ವಿವಿಧ ಕ್ಷೇತ್ರಗಳ ಬಗ್ಗೆ ಅರಿವು ಬೆಳೆಸಿಕೊಳ್ಳಬೇಕೆಂದರು.

ಪ್ರಸ್ತುತ ಸಾಮಾಜಿಕ ಜಾಲತಾಣಗಳು ಯುವ ಸಮುದಾಯದ ಮೇಲೆ ಹೆಚ್ಚಿನ ಪ್ರಭಾವ ಬೀರುತ್ತಿವೆ. ಅವುಗಳನ್ನು ಕೇವಲ ಮನರಂಜನೆಗೆ ಸೀಮಿತಗೊಳಿಸದೆ, ಜ್ಞಾನವೃದ್ಧಿ, ದೇಶದ ಪ್ರಗತಿ ಹಾಗೂ ಸಾಮಾಜಿಕ ಜಾಗೃತಿಗೆ ಪೂರಕವಾಗಿ ಬಳಸಿಕೊಳ್ಳಬೇಕೆಂದು ಹೇಳಿದರು.

ಯುವಜನರು ದೇಶದ ಭವಿಷ್ಯದ ಶಕ್ತಿಯಾಗಿದ್ದು, ಉತ್ತಮ ಆಲೋಚನೆ, ಶಿಸ್ತು, ಆತ್ಮವಿಶ್ವಾಸ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಂಡು ರಾಷ್ಟ್ರ ನಿರ್ಮಾಣದಲ್ಲಿ ತಮ್ಮದೇ ಆದ ಕೊಡುಗೆ ನೀಡಬೇಕು. ಸ್ಪರ್ಧಾತ್ಮಕ ಮನೋಭಾವದೊಂದಿಗೆ ಮುನ್ನಡೆಯುವ ಮೂಲಕ ಜೀವನದಲ್ಲಿ ಉತ್ತಮ ಸಾಧನೆ ಮಾಡಬಹುದೆಂದರು.

ಪ್ರಾಂಶುಪಾಲ ಅನಂತರಾಜು ಅವರು ಮಾತನಾಡಿ, ಚರ್ಚಾ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆಗಳು ವಿದ್ಯಾರ್ಥಿಗಳ ಜ್ಞಾನವನ್ನು ಹೆಚ್ಚಿಸುವುದರ ಜೊತೆಗೆ ತಮ್ಮ ವಿಚಾರಗಳನ್ನು ಸ್ಪಷ್ಟವಾಗಿ ವ್ಯಕ್ತಪಡಿಸುವ ಸಾಮರ್ಥ್ಯವನ್ನು ಬೆಳೆಸುತ್ತವೆ. ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಲು ಪ್ರೇರಣೆ ನೀಡಲಿವೆ ಎಂದರು.

ವಿದ್ಯಾರ್ಥಿಗಳು ಪಠ್ಯಕ್ರಮದ ಜೊತೆಗೆ ಸಾಮಾನ್ಯ ಜ್ಞಾನ, ಪ್ರಚಲಿತ ವಿದ್ಯಮಾನಗಳು ಹಾಗೂ ಸಾಮಾಜಿಕ ವಿಚಾರಗಳ ಬಗ್ಗೆ ತಿಳಿದುಕೊಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿರುವ ಪ್ರತಿಭೆಯನ್ನು ಗುರುತಿಸಿ ಅದಕ್ಕೆ ಸೂಕ್ತ ವೇದಿಕೆ ಕಲ್ಪಿಸುವುದು ಶಿಕ್ಷಣ ಸಂಸ್ಥೆಗಳ ಜವಾಬ್ದಾರಿ ಯಾಗಿದೆ ಎಂದು ಹೇಳಿದರು.

ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಮಂಜು ಶೆಟ್ಟಿಗೌಡ, ಸದಸ್ಯ ಲೋಕೇಶ್, ನಿವೃತ್ತ ಪ್ರಾಂಶುಪಾಲ ಬಸವರಾಜು, ನಿವೃತ್ತ ಉಪನ್ಯಾಸಕ ಸುರೇಶ್, ತಾಲ್ಲೂಕು ನೌಕರರ ಸಂಘದ ಮಾಜಿ ಅಧ್ಯಕ್ಷ ವೆಂಕಟೇಶ್, ಮುಖಂಡರಾದ ಪಾಂಡುರಂಗ, ನಸ್ರುಲ್ಲಾ ಟಿಪ್ಪು, ಉಪನ್ಯಾಸಕರಾದ ದಶರಥ, ಕೃಷ್ಣೇಗೌಡ ಇತರರಿದ್ದರು.

ಯುವ ಸ್ವಾತಂತ್ರ್ಯೋತ್ಸವದ ಅಂಗವಾಗಿ ನಡೆದ ಪ್ರಬಂಧ ಮತ್ತು ಚರ್ಚಾ ಸ್ಪರ್ಧೆಗಳಲ್ಲಿ ತಾಲ್ಲೂಕಿನ 16 ಕಾಲೇಜಿನ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ತಮ್ಮ ವಿಚಾರಗಳನ್ನು ಮಂಡಿಸಿದರು. ಪ್ರಬಂಧ ಹಾಗೂ ಚರ್ಚಾ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು. ಉಪನ್ಯಾಸಕರಾದ ಬಾಬು ವರ್ದನ್, ಶರತ್, ಪ್ರಸನ್ನ, ರವಿಕುಮಾರ್, ಶ್ವೇತ ಹಾಗೂ ಸುಧಾರಾಣಿ ಅವರು ತೀರ್ಪುಗಾರರಾಗಿ ಕಾರ್ಯ ನಿರ್ವಹಿಸಿದರು.

## ಗುಜರಾತ್ ಕೇಂದ್ರಿತ ಮಾದರಿ ವಿರುದ್ಧ ಕಿಡಿ

• ಪ್ರಜೋದಯ ವರದಿ

**ಚೆನ್ನೈ:** ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ಅಭಿವೃದ್ಧಿ ನೀತಿ ಗುಜರಾತ್ ಕೇಂದ್ರಿತವಾಗಿದೆ ಎಂದು ತಮಿಳುನಾಡು ಬಿಜೆಪಿಯ ಮಾಜಿ ಅಧ್ಯಕ್ಷ ಹಾಗೂ ವಿ ದಿ ಲೀಡರ್ಸ್ ಚಳವಳಿಯ ಸಂಸ್ಥಾಪಕ ಕೆ.ಅಣ್ಣಾಮಲೈ ಟೀಕಿಸಿದ್ದಾರೆ.

ಹೂಡಿಕೆ, ತಂತ್ರಜ್ಞಾನ ಯೋಜನೆಗಳು ಮತ್ತು ಬೃಹತ್ ಕ್ರೀಡಾಕೂಟಗಳು ಕೇವಲ ಒಂದೇ ರಾಜ್ಯಕ್ಕೆ ಸೀಮಿತವಾಗಬಾರದೆಂದು ಅಣ್ಣಾಮಲೈ ಪ್ರತಿಪಾದಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಗುಜರಾತ್ ರಾಜ್ಯದವರು ಎಂಬುದನ್ನು ಅಣ್ಣಾಮಲೈ ಪರೋಕ್ಷವಾಗಿ ಉಲ್ಲೇಖಿಸಿದ್ದಾರೆ.

ಬೇಕಾಗಿದ್ದಾರೆ

ಹಾಸನ ಪ್ರತಿಷ್ಟಿತ ಮ್ಯಾನ್ ಪವರ್ ಏಜನ್ಸಿಗೆ ಕೆಳಕಂಡ ಅಭ್ಯರ್ಥಿಗಳು ಬೇಕಾಗಿದ್ದಾರೆ.

• ಫೀಲ್ಡ್ ಆಫೀಸರ್ : ಸೆಕ್ಯೂರಿಟಿ ಏಜನ್ಸಿಯಲ್ಲಿ ಕನಿಷ್ಠ 1 ವರ್ಷದ ಅನುಭವ. ವಿದ್ಯಾರ್ಹತೆ - ಪಿ.ಯು.ಸಿ

• ರಿಸೆಪ್ಶನಿಸ್ಟ್ : ಯಾವುದೇ ಕಂಪನಿಯಲ್ಲಿ ಕನಿಷ್ಠ 1 ವರ್ಷದ ಅನುಭವ. ವಿದ್ಯಾರ್ಹತೆ - ಪಿ.ಯು.ಸಿ / ಪದವಿ

• ಡಾಟಾ ಎಂಟ್ರಿ ಆಪರೇಟರ್ : ಯಾವುದೇ ಕಂಪನಿಯಲ್ಲಿ ಕನಿಷ್ಠ 1 ವರ್ಷದ ಅನುಭವ ಮತ್ತು ಎಕ್ಸೆಲ್‌ನಲ್ಲಿ ನೈಪುಣ್ಯತೆ ಅಗತ್ಯ. ವಿದ್ಯಾರ್ಹತೆ - ಪದವಿ

ಆಸಕ್ತರು ಸಂಪರ್ಕಿಸಿ : 8884800050

WE ARE HIRING

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK